ಕನ್ನಡ ದಿನಪತ್ರಿಕೆ
20 ಮಾರ್ಚ | ಬುಧವಾರ
20 MARCH 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...
₹4 | ಸಂಪುಟ – 5 ಸಂಚಿಕೆ – 28 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಕಾಂಗ್ರೆಸ್ ನಿಂದ 6 ಮಹಿಳೆಯರಿಗೆ ಟಿಕೆಟ್



ಬೆಂಗಳೂರು: ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಿಂದ ಈ ಬಾರಿ ಆರು ಕ್ಷೇತ್ರಗಳಲ್ಲಿ ಮಹಿಳೆಯರಿಗೆ ಟಿಕೆಟ್ ನೀಡುವ ಸಾಧ್ಯತೆ ಇದೆ. ಈಗಾಗಲೇ ಶಿವಮೊಗ್ಗ ಲೋಕಸಭಾ ಕ್ಷೇತ್ರದಿಂದ ಗೀತಾ ಶಿವರಾಜ್ ಕುಮಾರ್ ಗೆ ಟಿಕೆಟ್ ಘೋಷಣೆಯಾಗಿದೆ.

ಉತ್ತರ ಕನ್ನಡ ಲೋಕಸಭಾ ಕ್ಷೇತ್ರದಿಂದ ಅಂಜಲಿ ನಿಂಬಾಳ್ಕರ್, ದಾವಣಗೆರೆ ಲೋಕಸಭಾ ಕ್ಷೇತ್ರದಿಂದ ಶಾಮನೂರು ಶಿವಶಂಕರಪ್ಪ ಸೊಸೆ ಪ್ರಭಾ ಮಲ್ಲಿಕಾರ್ಜುನ್ ಅವರ ಹೆಸರನ್ನು ಫೈನಲ್ ಮಾಡಲಾಗಿದ್ದು, ಅಧಿಕೃತ ಘೋಷಣೆಯಷ್ಟೇ ಬಾಕಿ ಇದೆ.

ಬಾಗಲಕೋಟೆ ಕ್ಷೇತ್ರದಿಂದ ಸಚಿವ ಶಿವಾನಂದ ಪಾಟೀಲ್ ಪುತ್ರಿ ಸಂಯುಕ್ತ ಪಾಟೀಲ್ ಅವರಿಗೆ ಟಿಕೆಟ್ ಸಿಗುವ ಸಾಧ್ಯತೆ ಇದೆ. ವೀಣಾ ಕಾಶಪ್ಪನವರ್ ಕೂಡ ಆಕಾಂಕ್ಷಿಯಾಗಿದ್ದಾರೆ. ಚಿಕ್ಕೋಡಿ ಲೋಕಸಭೆ ಕ್ಷೇತ್ರದಿಂದ ಸಚಿವ ಸತೀಶ್ ಜಾರಕಿಹೊಳಿ ಪುತ್ರಿ ಪ್ರಿಯಾಂಕಾ ಜಾರಕಿಹೊಳಿ, ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದಿಂದ ಸಚಿವ ರಾಮಲಿಂಗಾರೆಡ್ಡಿ ಪುತ್ರಿ ಸೌಮ್ಯಾ ರೆಡ್ಡಿ ಸ್ಪರ್ಧಿಸುವ ಸಾಧ್ಯತೆ ಇದೆ.



## ಬೆಳಗಾವಿಯಲ್ಲಿ ಪ್ರತ್ಯಕ್ಷವಾದ ಹುಲಿರಾಯ

ಬೆಳಗಾವಿ: ನಗರದ ಇಂಡಾಲಕೋ ಫ್ಯಾಕ್ಟರಿ ಒಳಗಡೆ 18ರ ರಾತ್ರಿ 10 ಗಂಟೆಗೆ ಪ್ರತ್ಯಕ್ಷವಾದ ಹುಲಿರಾಯ ಕಂಡು ಫ್ಯಾಕ್ಟರಿಯಲ್ಲಿದ್ದ ಕಾರ್ಮಿಕರಲ್ಲಿ ಭಯದ ವಾತಾವರಣ ಹುಟ್ಟಿಸಿದೆ.

ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳ ಪರಿಶೀಲಿಸಿ ಹೆಜ್ಜೆ ಗುರುತು ನೋಡಿ ಹುಲಿ ಎಂದು ಪತ್ತೆ ಹಚ್ಚಲಾಗಿದೆ. ನಗರದಲ್ಲಿ ಮೇಲಿಂದಮೇಲೆ ವನ್ಯ ಜೀವಿಗಳ ಆಗಮನ ತಾನವಾಗಿದೆ ಬೆಳಗಾವಿ ನಗರದಲ್ಲಿ ಕಳೆದ ವಾರವೇ ಗಜರಾಜನ ದರ್ಶನವಾಗಿತ್ತು. ಇವಾಗ ಹುಲಿರಾಯನ ದರ್ಶನವಾಗಿದೆ. ಇಂಡಲಾಕೋ ಫ್ಯಾಕ್ಟರಿಯ ಸುತ್ತ ಮುತ್ತಲಿನ ಪ್ರದೇಶದಲ್ಲಿ ಭಯದ ವಾತಾವರಣ ಸೃಷ್ಟಿಯಾಗಿದೆ.

## ನನ್ನನ್ನು ಗೆಲ್ಲಿಸಿ, ಚಿತ್ರರಂಗದ ಪರವಾಗಿ ಇರ್ತಿನಿ: ಗೀತಾ ಶಿವರಾಜ್‌ಕುಮಾರ್



ಶಿವಮೊಗ್ಗ: ಮಾಧ್ಯಮಗಳೊಂದಿಗೆ ಮಾತನಾಡಿ ಗೀತಾ ಶಿವರಾಜ್‌ಕುಮಾರ್ ಈಗಾಗಲೇ ಕಾಂಗ್ರೆಸ್‌ನಿಂದ ಟಿಕೆಟ್ ಸಿಕ್ಕಿದ್ದು, ಗೀತಾ ಪ್ರಚಾರ ಮಾಡಿದ್ದಾರೆ. ನಾನು ಶಿವಮೊಗ್ಗದ ಜನರ ಪರ ನಿಲ್ತೇನೆ, ಮಹಿಳೆಯರ ಪರವಾಗಿ ಕೆಲಸ ಮಾಡುತ್ತೇನೆ. ಚಿತ್ರರಂಗದ ಕೈ ಬಿಡುವುದಿಲ್ಲ ಎಂದು ಹೇಳಿದ್ದಾರೆ.

ಶಿವಮೊಗ್ಗದಲ್ಲಿ ಕೇಸರಿ ಗಾಳಿ ಇದೆ, ಈಗಾಗಲೇ ಬಿ.ವೈ. ರಾಘವೇಂದ್ರ ಹಾಗೂ ಸ್ವತಂತ್ರ ಅಭ್ಯರ್ಥಿಯಾಗಿ ಕೆ. ಎಸ್. ಈಶ್ವರಪ್ಪ ಸ್ಪರ್ಧೆ ಮಾಡುತ್ತಿದ್ದಾರೆ. ಈ ಇಬ್ಬರೂ ಶಿವಮೊಗ್ಗದಲ್ಲಿ ವರ್ಷಗಳಿಂದ ನೆಲೆಸಿದ್ದಾರೆ. ಇದೀಗ ಗೀತಾ ಶಿವರಾಜ್‌ಕುಮಾರ್ ಕೂಡ ಅಖಾಡಕ್ಕಿಳಿದಿದ್ದು, ಸ್ಪರ್ಧೆ ಆಸಕ್ತಿದಾಯಕವಾಗಿರಲಿದೆ.



## ಬೆಳ್ಳಂದೂರಿನ ಶಾಲೆ ಆವರಣದಲ್ಲಿ ಸ್ಫೋಟಕಗಳು ಪತ್ತೆ: ಬೆಚ್ಚಿ ಬಿದ್ದ ಮಕ್ಕಳು

ಬೆಂಗಳೂರು: ಇತ್ತೀಚೆಗಷ್ಟೇ ರಾಮೇಶ್ವರಂ ಕೆಫೆ ಬಾಂಬ್ ಬ್ಲಾಸ್ಟ್ ಪ್ರಕರಣ ಇಡೀ ಬೆಂಗಳೂರನ್ನು ಬೆಚ್ಚಿ ಬೀಳುವಂತೆ ಮಾಡಿತ್ತು. ಇದೀಗ ಈ ಬೆನ್ನಲ್ಲೇ ಶಾಲೆಯ ಆವರಣದಲ್ಲಿ ಸ್ಫೋಟಕಗಳು ಪತ್ತೆಯಾಗಿವೆ.

ಬೆಳ್ಳಂದೂರಿನ ಪ್ರಕ್ರಿಯಾ ಶಾಲೆ ಮುಂಭಾಗದ ಖಾಲಿ ಜಮೀನಿನಲ್ಲಿ ಜಿಲೆಟಿನ್ ಕಡ್ಡಿ ಹಾಗೂ ಡಿಟೋನೇಟರ್ ಇನ್ನಿತರ ಸ್ಫೋಟಕಗಳು ಪತ್ತೆಯಾಗಿವೆ.

ಟ್ರ್ಯಕ್ಟರ್ ಒಂದರಲ್ಲಿ ಸ್ಫೋಟಕಗಳು ಪತ್ತೆಯಾಗಿದ್ದು, ಎಲ್ಲೆಡೆ ಆತಂಕ ಸೃಷ್ಟಿಯಾಗಿದೆ. ಮೇಲ್ನೋಟಕ್ಕೆ ಕಟ್ಟಡ ನಿರ್ಮಾಣ ಮಾಡುವ ಜಾಗದಲ್ಲಿ ಬಂಡೆಗಳನ್ನು ಸ್ಫೋಟಿಸಲು ತಂದಂತೆ ಕಾಣುತ್ತಿದೆ. ಬೆಳ್ಳಂದೂರು ಠಾಣೆಯಲ್ಲಿ ಕೇಸ್ ದಾಖಲಾಗಿದೆ.

## ಬೆಂಗಳೂರು ವಿಮಾನ ನಿಲ್ದಾಣದಲ್ಲಿ ನಾಲ್ವರು ಪ್ರಯಾಣಿಕರಿಂದ 1 ಕೋಟಿ ರೂ. ಮೌಲ್ಯದ ಚಿನ್ನ ಜಪ್ತಿ

ಬೆಂಗಳೂರು: ಬೆಂಗಳೂರು ಏರ್‌ಪೋರ್ಟ್ ಕಸ್ಟಮ್ಸ್‌ನ ಏರ್ ಇಂಟೆಲಿಜೆನ್ಸ್ ಯೂನಿಟ್ ಸೋಮವಾರ ವಿವಿಧ ವಿಮಾನಗಳಲ್ಲಿ ಆಗಮಿಸಿದ ನಾಲ್ವರು ಪ್ರಯಾಣಿಕರಿಂದ ಸುಮಾರು ಒಂದು ಕೋಟಿ ರೂಪಾಯಿ ಮೌಲ್ಯದ 1.5 ಕಿಲೋಗ್ರಾಂಗಳಷ್ಟು ಚಿನ್ನವನ್ನು ವಶಪಡಿಸಿಕೊಂಡಿದೆ.

ಓರ್ವ ಮಹಿಳೆ ಸೇರಿದಂತೆ ಎಲ್ಲಾ ನಾಲ್ವರು ಪ್ರಯಾಣಿಕರು ಗಲ್ಫ್ ದೇಶಗಳಿಂದ ಮತ್ತು ಮಲೇಷ್ಯಾದಿಂದ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಭಾರತೀಯರು ಎಂದು ಕಸ್ಟಮ್ಸ್ ಅಧಿಕಾರಿಗಳು ತಿಳಿಸಿದ್ದಾರೆ.

ನಗರದಲ್ಲಿ ಐಟಿ ಮತ್ತು ಹಾರ್ಡ್‌ವೇರ್ ಉಪಕರಣಗಳನ್ನು ಮಾರಾಟ ಮಾಡುವ ಬೆಂಗಳೂರಿನ 30 ವರ್ಷದ ವ್ಯಕ್ತಿಯೊಬ್ಬರು ನಿನ್ನೆ ರಾತ್ರಿ 11 ಗಂಟೆ ಸುಮಾರಿಗೆ ಕೌಲಾಲಂಪುರದಿಂದ ಏರ್ ಏಷ್ಯಾ ವಿಮಾನದಲ್ಲಿ(ಎಕೆ–053) ಆಗಮಿಸಿದ್ದು, ಅವರು



197.43 ಗ್ರಾಂ ತೂಕದ ಚಿನ್ನವನ್ನು ಕಚ್ಚಾ ಚಿನ್ನದ ಕಡಾ ಮತ್ತು ಓ–ಲಿಂಕ್ ಚೈನ್ ರೂಪದಲ್ಲಿ ಚಿನ್ನವನ್ನು ಬಚ್ಚಿಟ್ಟಿದ್ದರು. ಇದರ ಒಟ್ಟು ಮಾರುಕಟ್ಟೆ ಮೌಲ್ಯ 12,55,655 ರೂ. ದೇಶದೊಳಗೆ ಕಚ್ಚಾ ಚಿನ್ನವನ್ನು ಯಾವುದೇ ರೂಪದಲ್ಲಿ ತರುವುದನ್ನು ನಿಷೇಧಿಸಲಾಗಿದೆ.

"ಈ ಘಟನೆಯು ನಮಗೆ ಸಾಕಷ್ಟು ಆತಂಕಕಾರಿಯಾಗಿದೆ.

ಏಕೆಂದರೆ ಉತ್ತಮ ಸಂಬಳ ಪಡೆಯುವ ವೃತ್ತಿಪರರು ಸಹ ಈಗ ಇಂತಹ ಅಪರಾಧವನ್ನು ಮಾಡುವ ಆಮಿಷಕ್ಕೆ ಒಳಗಾಗುತ್ತಿದ್ದಾರೆ" ಎಂದು ಅಧಿಕಾರಿ ಆತಂಕ ವ್ಯಕ್ತಪಡಿಸಿದ್ದಾರೆ.

ಮತ್ತೊಂದು ಘಟನೆಯಲ್ಲಿ, ಕುವೈತ್‌ನಿಂದ ಏರ್ ಅರೇಬಿಯಾ ವಿಮಾನದಲ್ಲಿ(ಜೆ 9–431) ಆಗಮಿಸಿದ ಮಹಿಳೆ, ತಮ್ಮ ಬಟ್ಟೆಯೊಳಗೆ ಬಚ್ಚಿಟ್ಟುಕೊಂಡು ಒಟ್ಟು 196.73 ಗ್ರಾಂ ಕಚ್ಚಾ ಚಿನ್ನದ ಕಟ್ ಚೈನ್‌ಗಳು, ಬಳೆಗಳು ಮತ್ತು ಪೆಂಡೆಂಟ್‌ಗಳನ್ನು ಕಳ್ಳಸಾಗಣೆ ಮಾಡುವಾಗ ಸಿಕ್ಕಿಬಿದ್ದರು. ಇದರ ಮೌಲ್ಯ 12,51,203 ರೂ. ಎಂದು ಅವರು ತಿಳಿಸಿದ್ದಾರೆ.

ಮದೀನಾ ಮತ್ತು ಬಹ್ರೇನ್‌ನಿಂದ ಆಗಮಿಸಿದ ಇಬ್ಬರು ಪ್ರಯಾಣಿಕರು ವಿದೇಶಿ ಮೂಲದ ಚಿನ್ನವನ್ನು, ಚೈನ್‌ಗಳು ಮತ್ತು ಸಣ್ಣ ಚಿನ್ನದ ಬಾರ್‌ಗಳ ರೂಪದಲ್ಲಿ ಕಳ್ಳಸಾಗಣೆ ಮಾಡಲು ಪ್ರಯತ್ನಿಸಿದರು. ಅವರ ಅನುಮಾನಾಸ್ಪದ ವರ್ತನೆಯ ನಂತರ ಕಸ್ಟಮ್ಸ್ ಅಧಿಕಾರಿಗಳು ಅವರನ್ನು ತಪಾಸಣೆಗೆ ಒಳಪಡಿಸಿದಾಗ ಸಿಕ್ಕಿಬಿದ್ದಿದ್ದಾರೆ. ಇಬ್ಬರು ಪ್ರಯಾಣಿಕರಿಂದ 74,64,986 ರೂ. ಮೌಲ್ಯದ ಒಟ್ಟು 1.167 ಕೆಜಿ ಚಿನ್ನವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬೆಳಗಾವಿಯಿಂದ ಶೆಟ್ಟರ್ ಸ್ಪರ್ಧೆ ಬಹುತೇಕ ಖಚಿತ

ಬೆಳಗಾವಿ: ಬೆಳಗಾವಿ ಲೋಕಸಭಾ ಟಿಕೆಟ್ ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್‌ಗೆ ಸಿಗುವುದು ಬಹುತೇಕ ಖಚಿತವಾಗಿದೆ.



ಈ ಬಗ್ಗೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜಯಪ್ರಕಾಶ ನಡ್ಡಾ ಹಸಿರು ನಿಶಾನೆ ತೋರಿದ್ದಾರೆ. ಜಗದೀಶ ಶೆಟ್ಟರ್ ಆಸೆಯಂತೆ ಧಾರವಾಡ ಮತ್ತು ಹಾವೇರಿ ಕ್ಷೇತ್ರದಲ್ಲಿ ಸ್ಪರ್ಧೆಗೆ ಅವಕಾಶ ಸಿಗದಿದ್ದರೂ ಅನಿವಾರ್ಯವಾಗಿ ಬೆಳಗಾವಿ ಟಿಕೆಟ್ ಒಪ್ಪಿಕೊಳ್ಳುವಂತಹ ಸ್ಥಿತಿ ನಿರ್ಮಾಣವಾಗಿತ್ತು. ಆದರೆ, ಅಲ್ಲಿ ಸ್ಥಳೀಯ ನಾಯಕರ ಆಕ್ಷೇಪ, ಶೆಟ್ಟರ್ ಗೋ ಬ್ಯಾಕ್ ಹೇಳಿಕೆಗಳಿಂದಾಗಿ ಅವರಿಗೆ ಮತ್ತೆ ಆತಂಕ ಎದುರಾಗಿತ್ತು. ಬಿಜೆಪಿ 3ನೇ ಪಟ್ಟಿ ಇನ್ನೂ 2–3 ದಿನಗಳಲ್ಲಿ ಬಿಡುಗಡೆ ಆಗಬಹುದು.

ಬೆಳಗಾವಿ ಲೋಕಸಭಾ ಟಿಕೆಟ್ ಪಡೆಯಲು ಎರಡು ದಿನಗಳಿಂದ ದೆಹಲಿಯಲ್ಲೇ ಶೆಟ್ಟರ್ ಬೀಡು ಬಿಟ್ಟಿದ್ದರು. ಯಡಿಯೂರಪ್ಪ ಅವರನ್ನು ಭೇಟಿ ಮಾಡಿ ಟಿಕೆಟ್ ಖಾತ್ರಿಪಡಿಸಿಕೊಂಡಿದ್ದರು. ಕೇಂದ್ರ ಗ್ರಹ ಸಚಿವ ಅಮಿತ್ ಷಾ ಅವರನ್ನು ಸಹ ಭೇಟಿ ಮಾಡಿ ಟಿಕೆಟ್ ಅಂತಿಮಗೊಂಡ ನಂತರ ಹುಬ್ಬಳ್ಳಿಗೆ ಮರಳಿದ್ದರು. ಒಟ್ಟಾರೆ ಬೆಳಗಾವಿ ಬಿಜೆಪಿ ಮುಖಂಡರ ಆಕ್ಷೇಪದ ನಡುವೆಯೂ ಜಗದೀಶ್ ಶೆಟ್ಟರ್ ಬೆಳಗಾವಿ ಲೋಕಸಭಾ ಮತಕ್ಷೇತ್ರದ ಟಿಕೆಟ್ ಗಿಟ್ಟಿಸಿಕೊಳ್ಳುವಲ್ಲಿ ಬಹುತೇಕ ಯಶಸ್ವಿಯಾಗಿದ್ದು ಇದೀಗ ಬಿಡುಗಡೆಗೊಳ್ಳಲಿರುವ ಬಿಜೆಪಿ ಪಟ್ಟಿಯಲ್ಲಿ ಶೆಟ್ಟರ್ ಹೆಸರು ಬೆಳಗಾವಿಯಿಂದ ಅಧಿಕೃತವಾಗಿ ಘೋಷಣೆಯಾಗುವುದು ಖಚಿತ ಎಂಬ ಮಾಹಿತಿ ಲಭಿಸಿದೆ.

## ಕಮಲ ಪಡೆಯಲ್ಲಿ ಹೆಚ್ಚುತ್ತಿದೆ ಬಂಡಾಯದ ಬಿಸಿ

ಬೆಂಗಳೂರು: ಮಲೆನಾಡ ಹೆಬ್ಬಾಗಿಲು ಶಿವಮೊಗ್ಗ ನಗರದ ಅಲ್ಲಮ ಪ್ರಭು ಮೈದಾನದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ (ಸೋಮವಾರ) ನಾಲ್ಕು ಲೋಕಸಭಾ ಕ್ಷೇತ್ರಗಳ ಭರ್ಜರಿ ಚುನಾವಣಾ ಪ್ರಚಾರ ನಡೆಸಿದರು. ಆದರೆ ಈ ಕಾರ್ಯಕ್ರಮಕ್ಕೆಈಶ್ವರಪ್ಪ ಸೇರಿ ಹಲವರು ಗೈರಾಗಿರುವುದು ಬಿಜೆಪಿ ಪಡೆಯಲ್ಲಿ ಬಂಡಾಯದ ಬಿಸಿ ಹೆಚ್ಚಾದಂತೆ ಕಾಣುತ್ತಿದೆ.

ಈಶ್ವರಪ್ಪ, ದಾವಣಗೆರೆ ನಾಯಕರು ಗೈರು: ಬಿಜೆಪಿ ಹಿರಿಯ ನಾಯಕ, ಮಾಜಿ ಡಿಸಿಎಂ ಕೆ. ಎಸ್.ಈಶ್ವರಪ್ಪ ಈಗಾಗಲೇ ಯಡಿಯೂರಪ್ಪ ಕುಟುಂಬದ ಮೇಲೆ ಮುನಿಸಿಕೊಂಡಿದ್ದಾರೆ. ತಮ್ಮ ಪುತ್ರ ಕಾಂತೇಶ್ಗೆ ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಟಿಕೆಟ್ ತಪ್ಪಲು



ಯಡಿಯೂರಪ್ಪ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಕಾರಣರು ಎಂದು ಅವರಿಬ್ಬರ ವಿರುದ್ಧ ಗರಂ ಆಗಿದ್ದಾರೆ. ಶಿವಮೊಗ್ಗ ಲೋಕಸಭಾ ಕ್ಷೇತ್ರದ ಬಿಜೆಪಿ ಬಂಡಾಯ ಅಭ್ಯರ್ಥಿಯಾಗಿ ಸ್ಪರ್ಧಿಸುವುದಾಗಿಯೂ ಅವರು ಹೇಳಿದ್ದಾರೆ. ಇದಕ್ಕಾಗಿ ಕ್ಷೇತ್ರದ ಪ್ರವಾಸ ಕೈಗೊಂಡಿದ್ದಾರೆ.

ಅಭ್ಯರ್ಥಿ ಬದಲಿಸುವಂತೆ ದಾವಣಗೆರೆ ಬಿಜೆಪಿ ರೆಬೆಲ್: ದಾವಣಗೆರೆ ಹಾಲಿ ಸಂಸದ ಜಿ. ಎಂ.ಸಿದ್ದೇಶ್ವರ್ ಅವರ ವಿರುದ್ಧ ದಾವಣಗೆರೆ ಜಿಲ್ಲೆ ಬಿಜೆಪಿಯೇ ರೆಬಲ್ ಆಗಿದೆ. ಸಿದ್ದೇಶ್ಬರ್ ಕಳೆದ ಅವಧಿಯಲ್ಲಿ ಇದು ನನ್ನ ಕೊನೆಯ ಚುನಾವಣೆ ಎಂದು ಘೋಷಣೆ ಮಾಡಿದ್ದರು. ಇದರಿಂದ ಹೊಸಬರಿಗೆ ಅವಕಾಶ ಸಿಗಬಹುದೆಂಬ ನಿರೀಕ್ಷೆ ಇತ್ತು. ಆದರೆ, ಸಿದ್ದೇಶ್ವರ್ ತಮ್ಮ ಪತ್ನಿ ಗಾಯತ್ರಿ ಅವರಿಗೆ ಟಿಕೆಟ್ ಕೊಡಿಸುವಲ್ಲಿ ಯಶಸ್ವಿಯಾಗಿದ್ದಾರೆ. ಸ್ಥಳೀಯವಾಗಿ ಯಾವುದೇ ಮಾಜಿ ಶಾಸಕರನ್ನೂ ಸಂಪರ್ಕಿಸದೆ ಹೈಕಮಾಂಡ್ ಟಿಕೆಟ್ ಘೋಷಣೆ ಮಾಡಿದೆ ಎಂದು ಜಿಲ್ಲಾ ಬಿಜೆಪಿ ನಾಯಕರು ಕೋಪಗೊಂಡಿದ್ದಾರೆ.

ಜಿಲ್ಲೆಯ ಮಾಜಿ ಸಚಿವ ಎಸ್.ಎ.ರವೀಂದ್ರನಾಥ್, ಮಾಜಿ ಶಾಸಕ ಎಂ.ಪಿ.ರೇಣುಕಾಚಾರ್ಯ, ಮಾಜಿ ಶಾಸಕ ಬಸವರಾಜ್ ನಾಯ್ಕ್, ದಾವಣಗೆರೆ ಉತ್ತರ ಮತಕ್ಷೇತ್ರದ ಪರಾಜಿತ ಅಭ್ಯರ್ಥಿ ಬಿ.ಜಿ.ಅಜಯ್ ಕುಮಾರ್, ದಾವಣಗೆರೆ ದಕ್ಷಿಣ ಮತಕ್ಷೇತ್ರದ ಪರಾಜಿತ ಬಿಜೆಪಿ ಅಭ್ಯರ್ಥಿ ಲೋಕಿಕೆರೆ ನಾಗರಾಜ್, ಮಾಜಿ ಶಾಸಕ ಮಾಡಳ್ ವಿರೂಪಾಕ್ಷಪ್ಪ ಪುತ್ರ ಬಿಜೆಪಿ ಮುಖಂಡ ಮಾಡಾಳ್ ಮಲ್ಲಿಕಾರ್ಜುನ್ ಹಾಗೂ ಜಗಳೂರು ಮಾಜಿ ಶಾಸಕ ಗುರಲಿಂಗನಗೌಡ ಮತ್ತು ಅವರ ಪುತ್ರ ಬಿಜೆಪಿ ಮುಖಂಡ, ಲೋಕಸಭಾ ಕ್ಷೇತ್ರದ ಟಿಕೆಟ್ ಆಕಾಂಕ್ಷಿ ಡಾ.ರವಿಕುಮಾರ್ ಹೀಗೆ ಹಲವರು ರೆಬಲ್ ಆಗಿದ್ದಾರೆ. ಇದರಿಂದ ದಾವಣಗೆರೆಯಲ್ಲಿ ಸಿದ್ದೇಶ್ವರ್ ೆ ಬಿಜೆಪಿ ನಾಯಕರು ಎಂಬ ಪರಿಸ್ಥಿತಿ ನಿರ್ಮಾಣವಾಗಿದೆ.

## ಶೆಟ್ಟರ್ ಅವರನ್ನು ಹರಕೆಯ ಕುರಿ ಮಾಡಲು ಬಿಜೆಪಿ ಹೊರಟಿದೆ: ಶಾಸಕ ಸವದಿ



ಬೆಂಗಳೂರು: ಶೆಟ್ಟರ್ ಅವರಿಗೆ ಉದ್ದೇಶಪೂರ್ವಕವಾಗಿ ಬೆಳಗಾವಿ ಕರೆತಂದು ಸೋಲಿಸುವ ಪ್ರಯತ್ನ ಬಿಜೆಪಿ ನಾಯಕರಿಂದ ನಡೆಯುತ್ತಿದೆ.ಶೆಟ್ಟರ್ ಅವರನ್ನು ಹರಕೆಯ ಕುರಿ ಮಾಡಲು ಬೆಳಗಾವಿ ಲೋಕಸಭಾ ಕ್ಷೇತ್ರದಿಂದ ಕಣಕ್ಕಿಳಿಸುವ ಹುನ್ನಾರ ನಡೆದಿದೆ ಎಂದು ಶಾಸಕ ಲಕ್ಷ್ಮಣ ಸವದಿ ಹೇಳಿದ್ದಾರೆ.

ನಗರದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತಾಡಿದ ಅವರು, ಯಾವ ಕುರಿಯನ್ನು ಎಲ್ಲಿ ನಿಲ್ಲಿಸಬೇಕು ಹೇಗೆ ಅದನ್ನು ಬಲಿ ಕೊಡಬೇಕು ಅಂತ ಬಿಜೆಪಿ ನಾಯಕರು ಶಿಸ್ತುಬದ್ಧವಾಗಿ ಪ್ಲ್ಯಾನ್ ಮಾಡಿದ್ದಾರೆ. ಶೆಟ್ಟರ್ ಅವರಿಗೆ ಟಿಕೆಟ್ ಸಿಗಲಿಲ್ಲವೆಂಬ ಹಪಾಹಪಿ ಇರಬಾರದು, ಮತ್ತು ಅವರು ಗೆದ್ದು ಸಂಸತ್ ಪ್ರವೇಶಿಸಬಾರದು, ಸೋತು ಸುಣ್ಣವಾಗಿ ಮನೆಯಲ್ಲಿ ಕೂರುವಂತಾಗಬೇಕು–ಇದು ಬಿಜೆಪಿ ನಾಯಕರು ಶೆಟ್ಟರ್ ಅವರಿಗಾಗಿ ತೋಡಿರುವ ಖೆಡ್ಡಾ ಎಂದು ಸವದಿ ಹೇಳಿದರು.

ಯಾವ ಕುರಿಯನ್ನು ಎಲ್ಲಿ ನಿಲ್ಲಿಸಬೇಕು ಹೇಗೆ ಅದನ್ನು ಬಲಿ ಕೊಡಬೇಕು ಅಂತ ಬಿಜೆಪಿ ನಾಯಕರು ಶಿಸ್ತುಬದ್ಧವಾಗಿ ಪ್ಲ್ಯಾನ್ ಮಾಡಿದ್ದಾರೆ ಎಂದು ಹೇಳಿದ ಸವದಿ, ಶೆಟ್ಟರ್ ಏಕಾಏಕಿ ಪಕ್ಷ ಬಿಟ್ಟರು, ಏಕಾಏಕಿಯಾಗಿ ವಾಪಸ್ಸು ಹೋದರು ಮತ್ತು ಏಕಾಏಕಿಯಾಗಿ ಸೋಲುವುದು ಕೂಡ ನಿಶ್ಚಿತ ಎಂದರು.

## ಗುಂಡಿನ ಚಕಮಕಿ : ನಾಲ್ವರು ನಕ್ಸಲರನ್ನು ಹೊಡೆದುರುಳಿಸಿದ ಖಾಕಿ ಪಡೆ



ಮುಂಬೈ: ಮಹಾರಾಷ್ಟ್ರದಲ್ಲಿ ಪೊಲೀಸರು ನಡೆಸಿದ ಎನ್‌ಕೌಂಟರ್‌ನಲ್ಲಿ ನಾಲ್ವರು ನಕ್ಸಲರು ಹತರಾಗಿದ್ದಾರೆ. ಮಹಾರಾಷ್ಟ್ರದ ಗಡ್ಚಿರೋಲಿಯಲ್ಲಿ ಪೊಲೀಸರು ಹಾಗೂ ನಕ್ಸಲರ ನಡುವೆ ಭಾರೀ ಗುಂಡಿನ ಚಕಮಕಿ ನಡೆದಿದ್ದು,ನಾಲ್ವರು ನಕ್ಸಲರನ್ನು ಪೊಲೀಸರು ಹೊಡೆದುರುಳಿಸಿದ್ದಾರೆ.

ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಅನಾಹುತ ಸೃಷ್ಟಿಸಲು ಸಂಚು ರೂಪಿಸಿದ್ದ ನಕ್ಸಲರು ಅರಣ್ಯಗಳಲ್ಲಿ ಅಡಗಿ ಕುಳಿತಿದ್ದರು. ಮಹಾರಾಷ್ಟ್ರ ಪೊಲೀಸರ ವಿಶೇಷ ಸಿ–60 ಕಮಾಂಡೋಗಳು ಹಾಗೂ ಸಿಆರ್‌ಪಿಎಫ್ ಕಮಾಂಡೋಗಳು ಅರಣ್ಯ ಪ್ರದೇಶದಲ್ಲಿ ಕಾರ್ಯಾಚರಣೆ ನಡೆಸಿದ್ದಾರೆ.

ನಕ್ಸಲರನ್ನು ಹಿಡಿದುಕೊಟ್ಟವರಿಗೆ 36 ಲಕ್ಷ ರೂಪಾಯಿ ಬಹುಮಾನ ಘೋಷಣೆ ಮಾಡಲಾಗಿತ್ತು. ಇದೀಗ ನಕ್ಷಲರು ಬಲಿಯಾಗಿದ್ದು, ಗುರುತನ್ನು ಪೊಲೀಸರು ಬಹಿರಂಗಪಡಿಸಿಲ್ಲ.

## ಬೆಳಗಾವಿ: ರೈಲು ಹಳಿ ಮೇಲೆ ಆತ್ಮಹತ್ಯೆ ಮಾಡಿಕೊಂಡ ಯುವಕ

ಬೆಳಗಾವಿ: ಯುವಕನೋರ್ವ ರೈಲು ಹಳಿ ಮೇಲೆ ಆತ್ಮಹತ್ಯೆ ಮಾಡಿಕೊಂಡ ಘಟನೆ ಜಿಲ್ಲೆಯ ಕಾಗವಾಡ ತಾಲೂಕಿನ ಉಗಾರ ರೈಲು ನಿಲ್ದಾಣ ಬಳಿ ಬೆಳಕಿಗೆ ಬಂದಿದೆ.

ಉಗಾರ ಗ್ರಾಮದ ಕುತಬುದ್ದಿನ ಇಮಾಮಸಾಬ ಶೇಖ (37) ಆತ್ಮಹತ್ಯೆ ಮಾಡಿಕೊಂಡ ಯುವಕ. ಅನಾರೋಗ್ಯದಿಂದ ಬಳಲುತ್ತಿದ್ದ ಕುತುಬುದ್ದಿನ ಜೀವನದಲ್ಲಿ ಜಿಗುಪ್ಸೆಗೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎನ್ನಲಾಗುತ್ತಿದೆ. ಬೆಳಗಾವಿ ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬೆಂಗಳೂರು: ಮೇಘನಾ ಫುಡ್ಸ್ ಗ್ರೂಪ್ ಮೇಲೆ ಐಟಿ ದಾಳಿ




ಬೆಂಗಳೂರು: ಮೇಘನಾ ಫುಡ್ಸ್ ಗ್ರೂಪ್ ಮೇಲೆ ಆದಾಯ ತೆರಿಗೆ ಅಧಿಕಾರಿಗಳು ಮಂಗಳವಾರ ದಾಳಿ ನಡೆಸಿದ್ದು, ದಾಖಲೆಗಳನ್ನು ಪರಿಶೀಲನೆ ನಡೆಸುತ್ತಿದ್ದಾರೆ.

ನಗರದ ಕೋರಮಂಗಲ, ಇಂದಿರಾನಗರ, ಜಯನಗರ ಸೇರಿ ಹಲವೆಡೆ ಇರುವ ಕಚೇರಿಗಳ ಮೇಲೆ ಐಟಿ ಅಧಿಕಾರಿಗಳು ದಾಳಿ ನಡೆಸಿ, ದಾಖಲೆಗಳನ್ನು ಪರಿಶೀಲಿಸುತ್ತಿದ್ದಾರೆ.

ಮೇಘನಾ ಫುಡ್ಸ್ ಹೆಸರಿನಲ್ಲಿ ಹೋಟೆಲ್ ಮತ್ತು ರೆಸ್ಟೋರೆಂಟ್ ಉದ್ಯಮ ನಡೆಸುತ್ತಿರುವ ಕಂಪನಿಯ ಆದಾಯ ತೆರಿಗೆ ಪಾವತಿಯಲ್ಲಿ ಭಾರೀ ವ್ಯತ್ಯಾಸ ಕಂಡು ಬಂದ ಹಿನ್ನೆಲೆಯಲ್ಲಿ ದಾಳಿ ನಡೆಸಲಾಗಿದೆ.

ಕರ್ನಾಟಕ ಮತ್ತು ಗೋವಾ ವಿಭಾಗದ ಐಟಿ ಅಧಿಕಾರಿಗಳ ತಂಡ ನಗರದಲ್ಲಿರುವ 10ಕ್ಕೂ ಹೆಚ್ಚು ಕಡೆ ದಾಳಿ ನಡೆಸಿ ದಾಖಲೆ ಪರಿಶೀಲಿಸುತ್ತಿದೆ ಎಂದು ವರದಿಗಳಿಂದ ತಿಳಿದುಬಂದಿದೆ.

## ಕಾನೂನು–ಸುವ್ಯವಸ್ಥೆ ಕಾಪಾಡಲು ಸಾರ್ವಜನಿಕರು ಸಹಕರಿಸಿ: ಪೊಲೀಸ್ ಕಮಿಷನರ್ ಇಡಾ ಮಾರ್ಟಿನ್

ಬೆಳಗಾವಿ: ಸಾರ್ವಜನಿಕರು ನಮ್ಮೊಂದಿಗೆ ಸಹಕರಿಸಿದರೆ ಅಪರಾಧ ನಿಯಂತ್ರಿಸಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡಬಹುದು ಎಂದು ನಗರ ನೂತನ ಪೊಲೀಸ್ ಆಯುಕ್ತ ಇಡಾ ಮಾರ್ಟಿನ್ ಹೇಳಿದರು.

ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬೆಳಗಾವಿಯ ಬಗ್ಗೆ ತಿಳಿದುಕೊಂಡಿದ್ದೇನೆ. ಚಳಿಗಾಲದ ಅಧಿವೇಶನದಲ್ಲಿ ಇಲ್ಲಿ ಕೆಲಸ ಮಾಡಿದ ಅನುಭವ ಇದೆ. ಆಡಳಿತಾತ್ಮಕವಾಗಿ ನಗರ ಪೊಲೀಸ್ ಇಲಾಖೆಯಲ್ಲಿ ಸುಧಾರಣೆ ತರಲಾಗುವುದು ಎಂದ ಅವರು, ಟ್ರಾಫಿಕ್ ಸಮಸ್ಯೆ ಹೀಗೆ ಒಬ್ಬೊಬ್ಬರದು ಒಂದೊಂದು ಸಮಸ್ಯೆ ಇರುತ್ತದೆ. ಎಲ್ಲರ ಸಮಸ್ಯೆಯೂ ಮುಖ್ಯ. ಹಾಗಾಗಿ ಸ್ಥಳೀಯವಾಗಿ ಸಭೆ ನಡೆಸುವ ಮೂಲಕ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುತ್ತೇವೆ.ಎಂದರು .



ಅಪರಾಧ ಪ್ರಕರಣಗಳಿಗೆ ಕಡಿವಾಣ ಹಾಕಲು ಪೊಲೀಸ್ ಇಲಾಖೆ ಚುರುಕಾಗಿ ಕೆಲಸ ಮಾಡಲು ಪ್ರಯತ್ನಿಸಲಾಗುವುದು. ನಿನ್ನೆ ನಾನು ನಗರ ಪೊಲೀಸ್ ಆಯುಕ್ತರಾಗಿ ಅಧಿಕಾರ ಸ್ವೀಕಾರ ಮಾಡಿದ್ದೇನೆ. ನಮ್ಮ ಸಿಬ್ಬಂದಿಗಳೊಂದಿಗೆ ಸಭೆ ನಡೆಸಿ ಮಾರ್ಗದರ್ಶನ ಪಡೆದಿದ್ದೇನೆ. ಬೆಳಗಾವಿ ನಗರದಲ್ಲಿ ಡಿಸಿಪಿಗಳಿಬ್ಬರೂ ಉತ್ತಮ ಕೆಲಸ ಮಾಡಿದ್ದಾರೆ ಎನ್ನುವ ಅಭಿಪ್ರಾಯ ವ್ಯಕ್ತವಾಗಿದೆ. ಕೇವಲ ನಮ್ಮ ಕಡೆಯಿಂದ ಕಾನೂನು ಸುವ್ಯವಸ್ಥೆ ಕಾಪಾಡಲು ಎಲ್ಲ ನಾಗರಿಕರ ಸಹಕಾರ ಪೊಲೀಸರಿಗೆ ಮಾಡಿದರೆ ನಗರವು ಶಾಂತವಾಗಿ ಇಡಲು ಸಾಧ್ಯ ಎಂದರು.


ಸಾರ್ವಜನಿಕರ ಸಮಸ್ಯೆಯನ್ನು ಬಗೆ ಹರಿಸಲು ವಿಳಂಬ ಮಾಡಿ ತಪ್ಪು ಮಾಡುವ ಅಧಿಕಾರಿಗಳ ವಿರುದ್ಧ ಮುಲ್ಲಾಜಿಲ್ಲದೆ ಕ್ರಮ ಜರುಗಿಸಲಾಗುವುದು. ಸಂಚಾರ ಸಮಸ್ಯೆಯ ಬಗ್ಗೆಯೂ ಸಂಚಾರ ಡಿಸಿಪಿಯೊಂದಿಗೆ ಸಭೆ ನಡೆಸಿದ್ದೇನೆ ಆದಷ್ಟು ಬೇಗ ಸಮಸ್ಯೆಯನ್ನು ಬಗೆ ಹರಿಸುವ ಪ್ರಯತ್ನ ಮಾಡಲಾಗುವುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಡಿಸಿಪಿ ರೋಹನ್ ಜಗದೀಶ್, ಎಸಿಪಿ ಸದಾಶಿವ ಕಟ್ಟಿಮನಿ ಇದ್ದರು.

## ಚಿಕ್ಕೋಡಿ ಲೋಕಸಭಾ ಅಖಾಡಕ್ಕೆ ಸಾಹುಕಾರ್ ಪುತ್ರಿ ಎಂಟ್ರಿ

ಬೆಳಗಾವಿ: ಕರ್ನಾಟಕದ ಗಡಿಗೆ ಹೊಂದಿಕೊಂಡಿರುವ ಬೆಳಗಾವಿಯ ತಾಲೂಕು ಕೇಂದ್ರವು ಆಗಿರುವ ಲೋಕಸಭಾ ಕ್ಷೇತ್ರ ಚಿಕ್ಕೋಡಿಯಲ್ಲಿ ದಿನದಿಂದ ದಿನಕ್ಕೆ ಚುನಾವಣೆ ಕಾವು ಹೆಚ್ಚಾಗುತ್ತಿದ್ದು, ಚಿಕ್ಕೋಡಿ ಕ್ಷೇತ್ರಕ್ಕೆ ಸಚಿವ ಸತೀಶ್ ಜಾರಕಿಹೊಳಿ ಅವರ ಪುತ್ರಿ ಪ್ರಿಯಾಂಕಾ ಜಾರಕಿಹೊಳಿ ಅವರನ್ನೇ ಕಣಕ್ಕೆ ಇಳಿಸಲು ಫೈನಲ್ ಮಾಡಲಾಗಿದೆ ಎಂದು ಹೇಳಲಾಗುತ್ತಿದೆ.

ಚಿಕ್ಕೋಡಿ ಲೋಕಸಭಾ ಚುನಾವಣೆಗೆ ಕಹಳೆ ಮೊಳಗಿದ್ದು, ಈಗಾಗಲೇ ಸಚಿವ ಸತೀಶ್ ಜಾರಕಿಹೊಳಿ ಪುತ್ರಿ ಟಿಕೆಟ್ ಘೋಷಣೆಗೂ ಮುನ್ನವೇ ಚುಟುವಟಿಕೆಗಳನ್ನ ಚುರುಕುಗೊಳಿಸಿದ್ದಾರೆ. ತಮ್ಮ ಕ್ಷೇತ್ರದಲ್ಲಿ ಬಿರುಸಿನ ನಡೆಯ ಜೊತೆಗೆ ಫುಲ್ ಆ್ಯಕ್ಟೀವ್ ಆಗಿದ್ದಾರೆ. ಸದ್ಯ ಕೈ ಪಕ್ಷ ಕಳೆದುಕೊಂಡ ಕ್ಷೇತ್ರದ ಅಧಿಕಾರವನ್ನು ಪಡೆಯಲು ಕಾಂಗ್ರೆಸ್ ಉತ್ಸಾಹ ತೋರಿದ್ದು, ಸದ್ಯ ನೂತನ ತಂತ್ರ ರೂಪಿಸಿದೆ. ಗೆಲುವಿನ ಭಾಗವಾಗಿಯೇ ಈ ಭಾಗದ ಪ್ರಭಾವಿ ರಾಜಕಾರಣಿ ಕಾಂಗ್ರೆಸ್‌ನ ಸತೀಶ್ ಜಾರಕಿಹೊಳಿ ಅವರ ಪುತ್ರಿ ಪ್ರಿಯಾಂಕಾ ಜಾರಕಿಹೊಳಿಯನ್ನು ರಾಜ್ಯ ಕಾಂಗ್ರೆಸ್ ನಾಯಕರು ಅಂತಿಮಗೊಳಿಸಿ, ಕೇಂದ್ರಕ್ಕೆ ಶಿಫಾರಸು ಮಾಡಿದ್ದಾರೆ. ಚಿಕ್ಕೋಡಿಯಿಂದ ಪುತ್ರಿ ಕಣ್ಣಕ್ಕಿಳಿದರೆ ಸ್ವತಃ ಸತೀಶ್ ಜಾರಕಿಹೊಳಿಯವರೇ ಸ್ಪರ್ಧೆ ಮಾಡಿದಂತೆ ಎಂಬ ಲೆಕ್ಕಾಚಾರ ಕಾಂಗ್ರೆಸ್‌ನಲ್ಲಿದೆ. ಈ ಮೂಲಕ ಪ್ರಭಾವಿ ನಾಯಕರ ಕುಟುಂಬದ ಸದಸ್ಯರನ್ನೇ ಅಖಾಡಕ್ಕೆ ಇಳಿಸಿ ಕ್ಷೇತ್ರ ಮರಳಿ ಪಡೆಯಲು ಕಾಂಗ್ರೆಸ್ ಸಜ್ಜಾಗಿದೆ.

ತಂದೆಯಂತೆ ಸಂಕಷ್ಟಕ್ಕೆ ಸ್ಪಂದಿಸುವ ಪ್ರಿಯಾಂಕಾ: ಪ್ರಿಯಾಂಕಾ ಜಾರಕಿಹೊಳಿ ಅವರು ವಿವಿಧ ಮಹಿಳಾ ಸಂಘ–




ಸಂಸ್ಥೆಗಳೊಂದಿಗೆ ಒಟನಾಟ ಹೊಂದಿದ್ದು, ಮಹಿಳಾ ಸಬಲೀಕರಣಕ್ಕೆ ಒತ್ತು ನೀಡಿದ್ದಾರೆ. ಅಲ್ಲದೇ, ಸಮಾಜ ಮುಖಿ ಕಾರ್ಯಕ್ರಮಗಳಲ್ಲಿ ತೊಡಗಿಕೊಂಡಿದ್ದು, ಇವರು ಕೂಡ ಸಾಕಷ್ಟು ಜನಪ್ರಿಯತೆ ಹೊಂದಿದ್ದಾರೆ. ಇನ್ನು ಸತೀಶ ಜಾರಕಿಹೊಳಿ ಫೌಂಡೇಶನ್ ವತಿಯಿಂದ ಪ್ರಿಯಾಂಕಾ ಅವರು ನಿರುದ್ಯೋಗಿ ಯುವಕರಿಗೆ ಘಟಪ್ರಭಾದ ಕಾಂಗ್ರೆಸ್ ಸೇವಾದಳದ ತರಬೇತಿ ಕೇಂದ್ರದಲ್ಲಿ ಪೊಲೀಸ್ ಹಾಗೂ ಸೇನಾ ತರಬೇತಿಯನ್ನು ಉಚಿತ ಶಿಬಿರ ನಡೆಸುವ ಮೂಲಕ ನಿರುದ್ಯೋಗಿಗಳ ಪಾಲಿಗೆ ಆಶಾಕಿರಣವಾಗಿ ಹೊರಹೊಮ್ಮಿದ್ದಾರೆ.

ತಂದೆ ಮಾರ್ಗದಲ್ಲಿಯೇ ಪ್ರಿಯಾಂಕಾ ನಡಿಗೆ: ಬೆಳಗಾವಿ ಸೇರಿದಂತೆ ರಾಜ್ಯದಲ್ಲಿಯೇ ಸತೀಶ ಜಾರಕಿಹೊಳಿ ಅವರು ಅತ್ಯಂತ ಪ್ರಭಾವಿ ರಾಜಕಾರಣಿಯಾಗಿದ್ದು, ಸಮಾಜ ಸೇವೆ ಮೂಲಕ ದೀನ ದಲಿತರಿಗೆ, ಬಡವರಿಗೆ, ಕೂಲಿ ಕಾರ್ಮಿಕರಿಗೆ, ನೊಂದ ಜೀವಗಳಿಗೆ ಭರವಸೆ ಹೊಂಬೆಳಕಾಗಿದ್ದಾರೆ. 90ರ ದಶಕದಲ್ಲಿ ತಂದೆ ಸತೀಶ ಜಾರಕಿಹೊಳಿ ಅವರು ಸಮಾಜ ಸೇವೆಗೆ ಬಂದಿದ್ದು, ಶೋಷಿತರ ಪರ ದನಿಯಾಗಿದ್ದರು. ಸಾಮಾಜಿಕ ತಳಹದಿ ತತ್ವದಡಿ ಅಧಿಕಾರ ವಿಕೇಂದ್ರೀಕರಣ ವ್ಯವಸ್ಥೆಯನ್ನು ಜಾರಿಗೆ ತಂದಿದ್ದರು. ಈ ಮೂಲಕ ಎಲ್ಲ ಸಮುದಾಯಗಳ ಜನರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅವರೆಲ್ಲರನ್ನೂ ಒಂದೇ ವೇದಿಕೆಗೆ ಕರೆದುಕೊಂಡು ಹೋಗುವುದು ಇತಿಹಾಸ. ಪ್ರತಿ ಜಿಲ್ಲೆಯಲ್ಲಿಯೂ ಸತೀಶ ಅಭಿಮಾನ ಬಳಗವು ಸತೀಶ ಸೂಚಿಸಿದ ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಿದ್ದು, ಈಗ ಸತೀಶ ಅವರ ಪುತ್ರಿ ಪ್ರಿಯಾಂಕಾ ಕೂಡ ತಂದೆಯಂತೆ ಬಡವರ ಕಷ್ಟಗಳಿಗೆ ಸ್ಪಂದಿಸುತ್ತ ಸಮಾಜಮುಖಿ ಕಾರ್ಯಗಳಿಗೆ ಮುಂಚೂಣಿಯಾಗಿ ನಿಂತಿದ್ದಾರೆ.

2ನೇ ಪುಟಕ್ಕೆ}

# ಚಿಕ್ಕೋಡಿ ಲೋಕಸಭಾ ಕ್ಷೇತ್ರದಲ್ಲಿದ್ದಾರೆ ಒಟ್ಟು 1741758 ಮತದಾರರು: ಜಿಪಂ ಸಿಇಓ ಶಿಂಧೆ

ಬೆಳಗಾವಿ: ಲೋಕಸಭಾ ಸಾರ್ವತ್ರಿಕ ಚುನಾವಣೆ–2024 ಕ್ಕೆ ಚಿಕ್ಕೋಡಿ ಲೋಕಸಭಾ ಚುನಾವಣಾಧಿಕಾರಿಗಳ ಕಾರ್ಯಾಲಯದಿಂದ ಎಲ್ಲ ಅಗತ್ಯ ಸಿದ್ದತೆ ಮಾಡಿಕೊಳ್ಳಲಾಗಿದ್ದು, ಚಿಕ್ಕೋಡಿ ಲೋಕಸಭಾ ಕ್ಷೇತ್ರದಲ್ಲಿ ಒಟ್ಟು 1741758 ಮತದಾರರು ತಮ್ಮ ಹಕ್ಕನ್ನು ಮಾಡಲಿದ್ದಾರೆ ಎಂದು ಜಿಲ್ಲಾ ಪಂಚಾಯತ ಸಿ.ಇ.ಓ ಹಾಗೂ ಚಿಕ್ಕೊಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳಾದ ರಾಹುಲ್ ಶಿಂಧೆ ಅವರು ತಿಳಿಸಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ–2024 ರ ಅಂಗವಾಗಿ ಚಿಕ್ಕೋಡಿ ಉಪವಿಭಾಗಾಧಿಕಾ–ರಿಗಳ ಕಚೇರಿ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು. ಈಗಾಗಲೇ ಭಾರತ ಚುನಾವಣಾ ಆಯೋಗವು 2024ರ ಲೋಕಸಭಾ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟ ಮಾಡಿದ್ದು, ಮಾ.16 ರಿಂದ ಮಾದರಿ ನೀತಿ ಸಂಹಿತೆ ಜಾರಿಯಾಗಿದೆ. ಕರ್ನಾಟಕದಲ್ಲಿ ಒಟ್ಟು 2 ಹಂತದಲ್ಲಿ ಚುನಾವಣೆಯನ್ನು ಜರುಗಿಸಲು ಆಯೋಗವು ನಿರ್ಧರಿಸಿದ್ದು, 01–ಚಿಕ್ಕೋಡಿ ಲೋಕಸಭಾ ಕ್ಷೇತ್ರಕ್ಕೆ 2ನೇ ಹಂತದಲ್ಲಿ ಚುನಾವಣೆ ನಡೆಸಲಾಗುತ್ತಿದೆ.

ಚಿಕ್ಕೋಡಿ ಲೋಕಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಏಪ್ರಿಲ್ 12ರಂದು ಅಧಿಸೂಚನೆ ಪ್ರಕಟವಾಗಲಿದೆ. ನಾಮಪತ್ರಗಳನ್ನು ಸಲ್ಲಿಸಲು ಏಪ್ರಿಲ್ 19 ಕೊನೆಯ ದಿನವಾಗಿದ್ದು, ಏ.20ಕ್ಕೆ ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ನಾಮಪತ್ರಗಳನ್ನು ಹಿಂತೆಗೆದುಕೊಳ್ಳಲು ಏ.22 ಕೊನೆಯ ದಿನವಾಗಿದೆ. ಮೇ 7ರಂದು ಮತದಾನ ಹಾಗೂ ಜೂನ್ 4ರಂದು ಮತ ಎಣಿಕೆ ನಡೆಯಲಿದೆ ಎಂದರು.

ಮತದಾರರ ವಿವರ: ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ 1741758 ಮತದಾರರ ಪೈಕಿ 875953 ಪುರುಷ ಮತದಾರರು, 865731 ಮಹಿಳಾ ಮತದಾರರು, 74 ಲಿಂಗತ್ವ ಅಲ್ಪಸಂಖ್ಯಾತ ಮತದಾರರಿರುತ್ತಾರೆ. ಮಾರ್ಚ 16 ರ ವರೆಗಿನ ಅಂಕಿ ಅಂಶಗಳ ಪ್ರಕಾರ 50589 ಯುವ ಮತದಾರರು ತಮ್ಮ ಹಕ್ಕನ್ನು ಚಲಾಯಿಸಲಿದ್ದು ಈ ಸಂಖ್ಯೆ ಇನ್ನೂ ಹೆಚ್ಚಾಗಬಹುದು ಎಂದು ತಿಳಿಸಿದರು.

ಮಾದರಿ ನೀತಿ ಸಂಹಿತೆಯ ಸಮರ್ಪಕ ಅನುಷ್ಠಾನಕ್ಕಾಗಿ ಚಿಕ್ಕೊಡಿ ಲೋಕಸಭಾ



ಕ್ಷೇತ್ರ ವ್ಯಾಪ್ತಿಯಲ್ಲಿ 148 ಸೆಕ್ಟರ ಆಫಿಸರ, 27 ಫ್ಲೈಯಿಂಗ್ ಸ್ಕ್ವಾಡ್, 21 ವಿಡಿಯೋ ಸರ್ವೆಲೆನ್ಸ್ ತಂಡಗಳನ್ನು ಹಾಗೂ 8 ಜನ ಸಹಾಯಕ ಚುನಾವಣಾಧಿಕಾರಿಗಳನ್ನು ನಿಯೋಜಿಸಲಾಗಿದೆ. ಅಲ್ಲದೇ ಮಾ.16 ರಿಂದ ಜೂನ್ 06 ರವರೆಗೆ ಮಾದರಿ ನೀತಿ ಸಂಹಿತೆಯು ಜಾರಿಯಲ್ಲಿದ್ದು, ಜಿಲ್ಲೆಯಲ್ಲಿ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಲಾಗುವದು ಎಂದರು.

ಚೆಕ್‌ಪೋಸ್ಟ: ಚಿಕ್ಕೊಡಿ ಲೋಕ ಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು 32 ಚೆಕಪೋಸ್ಟ ಗಳನ್ನು ರಚಿಸಲಾಗಿದ್ದು ಈ ಪೈಕಿ 18 ರಾಜ್ಯದ ಗಡಿ ಭಾಗದಲ್ಲಿ, ಜಿಲ್ಲೆಯ ಗಡಿಯಲ್ಲಿ 2 ಹಾಗೂ 12 ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಸ್ಥಾಪಿಸಲಾಗಿರುತ್ತದೆ. ಭಾರತ ಚುನಾವಣಾ ಆಯೋಗವು ವಿಕಲಚೇತನ ಮತದಾರರಿಗೆ ಮತ್ತು 85 ವರ್ಷ ಮೇಲ್ಪಟ್ಟ ವಯೋಮಾನ ಮತದಾರರು ಮತಚಲಾಯಿಸಲು ಅನುಕೂಲವಾಗುವಂತೆ ಮನೆಯಿಂದಲೇ ಮತದಾನಕ್ಕೆ ಅವಕಾಶ ನೀಡಿದೆ.

ಸಿವಿಝಿಲ್:ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಚುನಾವಣಾ ಆಯೊಗದಿಂದ ಅ–ತುರುಟ ಂಠಿಠಿ ಅನ್ನು ಪರಿಚಯಿಸಿದ್ದು, ಸಾರ್ವಜನಿಕರು ಅನಾಮಧೇಯವಾಗಿ ಅಥವಾ ತಮ್ಮ ವಿವರಗಳನ್ನು ಸಲ್ಲಿಸುವ ಮೂಲಕ ಯಾವುದೇ ಮಾದರಿ ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳ ಬಗ್ಗೆ ದೂರು ಸಲ್ಲಿಸಬಹುದು. ಸುವಿಧಾ: ಮಾದರಿ ನೀತಿ ಸಂಹಿತೆ ಅವಧಿಯಲ್ಲಿ ರಾಜ–ಕೀಯ ಪಕ್ಷಗಳು, ಸ್ಪರ್ಧಿಸುವ ಅಭ್ಯರ್ಥಿಗಳು ರಾಜಕೀಯ ಸಭೆ, ಸಮಾರಂಭಗಳು, ಪ್ರಚಾರ ಕಾರ್ಯಕ್ರಮಗಳನ್ನು ಆಯೋಜಿಸಲು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸಹಾಯಕ ಚುನಾವಣಾಧಿಕಾರಿಗಳಿಂದ ಮತ್ತು ಚುನಾವಣಾಧಿಕಾರಿಗಳಿಂದ ಕಡ್ಡಾಯವಾಗಿ ಅನುಮತಿ ಪಡೆಯಬೇಕು.

ಪ್ರಚಾರ ಕಾರ್ಯಕ್ರಮಗಳಿಗೆ ಉಪಯೋಗಿಸುವ ವಾಹನಗಳಿಗೆ, ಪಕ್ಷದ ಕಛೇರಿ ತೆರೆಯಲು ಸೇರಿದಂತೆ ಎಲ್ಲಾ ಪರವಾನಗಿಗಳಿಗೆ 48 ಗಂಟೆ ಮುಂಚಿತವಾಗಿ ಖಗಿಗಿಖಆಊಂ ಂಠಿಠಿ ಮೂಲಕ ಅಥವಾ ಲಿಖಿತ ರೂಪದಲ್ಲಿ ಅರ್ಜಿಗಳನ್ನು ಸಲ್ಲಿಸಬೇಕು. ಚುನಾವಣಾಧಿಕಾರಿಗಳ ಕಛೇರಿಯಲ್ಲಿ ಹಾಗೂ ಸಹಾಯಕ ಚುನಾವಣಾಧಿಕಾರಿಗಳ ಕಛೇ–ರಿಯಲ್ಲಿ ಅನುಮತಿಗಳಿಗಾಗಿ ಖಟಿರಟಜ ಘುಟಿಜಠತಿ ಖಥಿಣಜಟ (ಏಕ ಗವಾಕ್ಷಿ) ವ್ಯವಸ್ಥೆಯನ್ನು ಮಾಡಲಾಗಿರುತ್ತದೆ. ರಾಜ–ಕೀಯ ಪಕ್ಷಗಳು ಮತ್ತು ಸ್ಪರ್ಧಿಸುವ ಅಭ್ಯರ್ಥಿಗಳು ಇದರ ಸದುಪಯೋಗ ಉಪಯೋಗ ಪಡೆದುಕೊಳ್ಳಬಹುದು ಎಂದು ಚುನಾವಣಾಧಿಕಾರಿಗಳು ತಿಳಿಸಿದರು.

ಚುನಾವಣಾ ಸಹಾಯವಾಣಿ ಕೇಂದ್ರಗಳು: ಚಿಕ್ಕೋಡಿ ಲೋಕಸಭಾ ಚುನಾವಣಾಧಿಕಾರಿಗಳ ಕಚೇರಿ 08338–272132, 272130, ನಿಪ್ಪಾಣಿ_08348–220030, ಚಿಕ್ಕೊಡಿ ಸದಲಗಾ– 08338–272130, ಅಥಣಿ– 08289–468501, ಕಾಗವಾಡ– 08339–264555, ಕುಡಚಿ–9845986105, ರಾಯಬಾಗ–8867519106, ಹುಕ್ಕೇರಿ– 08333–265036, ಂಯುಮುಕನಮುರಡಿ–08333–200308, ಹಾಗೂ ಚುನಾವಣಾ ಸಹಾಯವಾಣಿ 1950 ಅನ್ನು ಸಂಪರ್ಕಿಸಬಹುದಾಗಿದೆ.

ಮುಕ್ತ ಹಾಗೂ ನ್ಯಾಯ ಸಮ್ಮತ ಚುನಾಣೆಗಳನ್ನು ಜರುಗಿಸಲು ಎಲ್ಲ ರೀತಿಯ ಸಿದ್ದತೆಗಳನ್ನು ಮಾಡಿಕೊಳ್ಳಲಾಗಿದ್ದು ಈ ನಿಟ್ಟಿನಲ್ಲಿ ಎಲ್ಲ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿದೆ ಎಂದು ಚುನಾವಣಾಧಿಕಾರಿಗಳಾದ ರಾಹುಲ ಶಿಂಧೆ ಅವರು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಪಂಚಾಯತ ಉಪಕಾರ್ಯದರ್ಶಿ ಬಸವರಾಜ ಅಡವಿಮಠ, ಡಿ.ಎಸ್.ಪಿ ಗೌಡರ, ಚಿಕ್ಕೊಡಿ ತಹಶಿಲ್ದಾರ ಸಿ.ಎಸ್.ಕುಲಕರ್ಣಿ ಉಪಸ್ಥಿತರಿದ್ದರು.

## ಚಿಕ್ಕೋಡಿ ಲೋಕಸಭಾ ಅಖಾಡಕ್ಕೆ ಸಾಹುಕಾರ್ ಪುತ್ರಿ ಎಂಟ್ರಿ

ಮೊದಲನೇ ಪುಟದಿಂದ}

2014ರಲ್ಲಿ ಕಾಂಗ್ರೆಸ್‌ಗೆ ಜಯ: ಚಿಕ್ಕೋಡಿಯ 2019ರ ಲೋಕಸಭಾ ಕ್ಷೇತ್ರದ ಚುನಾವಣೆಯಲ್ಲಿ ಬಿಜೆಪಿಯ ಅಭ್ಯರ್ಥಿ ಅಣ್ಣ ಸಾಹೇಬ್ ಜೊಲ್ಲೆ ಅವರು ಸಂಸತ್ತಿಗೆ ಆಯ್ಕೆ ಆದರು. ಅಣ್ಣಾಸಾಹೇಬ ಜೊಲ್ಲೆ ಅವರು 6,45,017 ಪಡೆದು ಎದುರಾಳಿ ಕಾಂಗ್ರೆಸ್ ಅಭ್ಯರ್ಥಿಯಾದ ಪ್ರಕಾಶ ಬಾಬಣ್ಣ ಹುಕ್ಕೇರಿ (5,26,140) ಅವರನ್ನು ಸೋಲಿಸಿದರು. 2014ರಲ್ಲಿ ಕಾಂಗ್ರೆಸ್ 'ಕೈ'ಗೆ ಚಿಕ್ಕೋಡಿ: 2014ರಲ್ಲಿ ಇದೇ ಚಿಕ್ಕೋಡಿ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ನ ಪ್ರಕಾಶ ಬಾಬಣ್ಣ ಹುಕ್ಕೇರಿ ಅವರು ಒಟ್ಟು 4,74,373 ಮತಗಳು ಪಡೆದು ಎದುರಾಳಿ ಬಿಜೆಪಿಯ ರಮೇಶ್ ವಿಶ್ವನಾಥ ಕತ್ತಿ (4,71,370) ಅವರನ್ನು ಸೋಲಿಸಿದ್ದರು. ಎನ್‌ಸಿಪಿಯಿಂದ ಸ್ಪರ್ಧಿಸಿದ್ದ ಪ್ರತಾಪರಾವ್ ಪಾಟೀಲ್ 42,738 ಮತ ಪಡೆದರು. ಜೆಡಿಎಸ್‌ನಿಂದ ಶ್ರೀಮಂತ ಬಾಳಾಸಾಹೇಬ್ ಪಾಟೀಲ್ ಅವರು ಕೇವಲ 39,992 ಮತಗಳಿಗೆ ತೃಪ್ತಿಪಟ್ಟುಕೊಂಡರು.

ಚಿಕ್ಕೋಡಿಯಲ್ಲಿವೆ 8 ವಿಧಾನಸಭಾ ಕ್ಷೇತ್ರ: ಚಿಕ್ಕೋಡಿ ಲೋಕಸಭಾ ವ್ಯಾಪ್ತಿಯಲ್ಲಿನ ಒಟ್ಟು 08 ವಿಧಾನಸಭಾ ಕ್ಷೇತ್ರದಲ್ಲಿ 05 ಕ್ಷೇತ್ರಗಳು ಕಾಂಗ್ರೆಸ್ ಪಾಲಾದರೆ, ಕೇವಲ 03 ಕ್ಷೇತ್ರದಲ್ಲಿ ಬಿಜೆಪಿ ಗೆಲುವು ಸಾಧಿಸಿದೆ. ನಿಪ್ಪಾಣಿ ಕ್ಷೇತ್ರ– ಶಶಿಕಲಾ ಜೊಲ್ಲೆ (ಬಿಜೆಪಿ–73,348 ಮತಗಳು), ಚಿಕ್ಕೋಡಿ ಸದಲಗಾ– ಗಣೇಶ್ ಹುಕ್ಕೇರಿ (ಕಾಂಗ್ರೆಸ್–1,28,349 ಮತಗಳು), ಅಥಣಿ– ಲಕ್ಷ್ಮಣ ಸವದಿ (ಕಾಂಗ್ರೆಸ್– 131,404 ಮತ), ಕಾಗವಾಡ– ರಾಜು ಕಾಗೆ (ಕಾಂಗ್ರೆಸ್– 83,387ಮತ) ಕುಡಚಿ (ಎಸ್‌ಸಿ)– ಮಹೇಂದ್ರ ತಮ್ಮಣ್ಣನವರ್ (ಕಾಂಗ್ರೆಸ್– 85,321 ಮತ), ರಾಯಭಾಗ್– ದುರ್ಯೋಧನ ಐಹೊಳೆ (ಬಿಜೆಪಿ– 67,502 ಮತ), ಹುಕ್ಕೇರಿ –ನಿಖಿಲ್ ಕತ್ತಿ (ಬಿಜೆಪಿ– 1,03,574 ಮತ) ಮತ್ತು ಯಮಕನಮರಡಿ (ಎಸ್‌ಟಿ) ಸತೀಶ್ ಜಾರಿಕಿಹೊಳಿ (ಕಾಂಗ್ರೆಸ್–73,512ಮತ) ಅವರು ವಿಜಯ ಸಾಧಿಸಿದ್ದಾರೆ.

ಮತದಾರರ ವಿವರ: ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ 1741758 ಮತದಾರರ ಪೈಕಿ 875953 ಪುರುಷ ಮತದಾರರು, 865731 ಮಹಿಳಾ ಮತದಾರರು, 74 ಲಿಂಗತ್ವ ಅಲ್ಪಸಂಖ್ಯಾತ ಮತದಾರರಿರುತ್ತಾರೆ. ಮಾರ್ಚ 16 ರ ವರೆಗಿನ ಅಂಕಿ ಅಂಶಗಳ ಪ್ರಕಾರ 50589 ಯುವ ಮತದಾರರು ತಮ್ಮ ಹಕ್ಕನ್ನು ಚಲಾಯಿಸಲಿದ್ದು ಈ ಸಂಖ್ಯೆ ಇನ್ನೂ ಹೆಚ್ಚಾಗಬಹುದು ಎಂದು ಹೇಳಲಾಗುತ್ತಿದೆ. ಸದ್ಯ ಚಿಕ್ಕೋಡಿ ಬಿಜೆಪಿ ಅಭ್ಯರ್ಥಿಯಾಗಿ ಹಾಲಿ ಸಂಸದ ಅಣ್ಣಾಸಾಹೇಬ್ ಜೊಲ್ಲೆ ಹೆಸರು ಘೋಷಣೆಯಾಗಿದ್ದು, ಕೈ ಪಕ್ಷದಿಂದ ಸಚಿವ ಸತೀಶ್ ಜಾರಕಿಹೊಳಿ ಅವರ ಪುತ್ರಿ ಪ್ರಿಯಾಂಕಾ ಜಾರಕಿಹೊಳಿ ಅವರನ್ನೇ ಚುನಾವಣಾ ಕಣಕ್ಕೆ ಇಳಿಸಲು ಸಕಲ ತಯಾರಿ ನಡೆಸಲಾಗುತ್ತಿದೆ. ಒಟ್ಟಾರೆಯಾಗಿ ಚಿಕ್ಕೋಡಿ ಕ್ಷೇತ್ರದಲ್ಲಿ ಸಚಿವರ ಪುತ್ರಿ ಫುಲ್ ಆ್ಯಕ್ಟೀವ್ ಆಗಿದ್ದು, ಹೈಕಮಾಂಡ್‌ನಿಂದ ಹೆಸರು ಘೋಷಣೆ ಮಾತ್ರ ಬಾಕಿಯಿದೆ.

## ಜಿಲ್ಲೆಯಲ್ಲಿ ಕುಡಿಯುವ ನೀರು, ಮೇವು ಕೊರತೆ ಇಲ್ಲ; ವಿಪತ್ತು ನೀರ್ವಹಣೆಗೆ 2105.63 ಲಕ್ಷ ರೂ.ಗಳ ಅನುದಾನವಿದೆ; ತಹಶೀಲ್ದಾರ ನೇತೃತ್ವದ ತಂಡವು ಪ್ರತಿ ಗ್ರಾಮಗಳಿಗೆ ಭೇಟಿ ನೀಡಿ ಸಮಸ್ಯೆಗಳಿದ್ದರೆ ಪರಿಹರಿಸಬೇಕು: ಡಿಸಿ ದಿವ್ಯ ಪ್ರಭು

ಧಾರವಾಡ: ಪ್ರತಿವಾರ ಬರ ಪರಿಸ್ಥಿತಿ ನಿರ್ವಹಣೆ ಕುರಿತು ತಹಶೀಲ್ದಾರ ಹಾಗೂ ಜಿಲ್ಲಾ ಮಟ್ಟದ ಅಧಿಕಾ–ರಿಗಳೊಂದಿಗೆ ಜಿಲ್ಲೆಯ ಬರ ಪರಿಸ್ಥಿತಿ ನಿರ್ವಹಣೆ ಕುರಿತು ನಿರಂತರವಾಗಿ ಪ್ರಗತಿ ಪರಿಶೀಲನೆ ಮಾಡುತ್ತಿರುವುದರಿಂದ ಎಲ್ಲಾ ಅಧಿಕಾರಿಗಳು ಕ್ರಿಯಾಶೀಲವಾಗಿ ತೊಡಗಿಸಿಕೊಂಡು ತಮ್ಮ ತಾಲೂಕಿನ ಸಮಸ್ಯೆಗಳಿಗೆ ನಿಗದಿತ ಸಮಯದಲ್ಲಿ ಸ್ಪಂದಿಸಿ ಪರಿಹರಿಸುತ್ತಿದ್ದಾರೆ. ಇದರಿಂದ ಜಿಲ್ಲೆಯಲ್ಲಿ ಬರ ಪರಿಸ್ಥಿತಿ ನಿರ್ವಹಣೆ ಉತ್ತಮವಾಗಿದೆ.

ತಹಸಿಲ್ದಾರ ಮತ್ತು ಇತರ ಅಧಿಕಾ–ರಿಗಳು ಪ್ರತಿದಿನ ಗ್ರಾಮಗಳಿಗೆ ಭೇಟಿ ನೀಡಿ, ಜನರ ಸಮಸ್ಯೆ, ಅಹವಾಲುಗಳಿಗೆ ಸ್ಪಂದಿಸಬೇಕೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಅವರು ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ತಹಶೀಲ್ದಾರರು, ತಾಲೂಕು ಪಂಚಾಯತ ಇಓ ಗಳು ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಧಾರವಾಡ ಜಿಲ್ಲೆಯ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಕುಡಿಯುವ ನೀರು ಮತ್ತು ಮೇವು



ಸಂಗ್ರಹಣೆ ಹಾಗೂ ಬೆಳೆಹಾನಿ ಪರಿಹಾರ ಪ್ರಗತಿ ಬಗ್ಗೆ ಪ್ರಗತಿ ಪರಿಶೀಲನಾ ಸಭೆ ಜರುಗಿಸಿ, ಮಾತನಾಡಿದರು.

ಕುಡಿಯುವ ನೀರಿನ ಕೊರತೆ ಆಗುವ ಸಂಭವವಿಯ ಗ್ರಾಮಗಳನ್ನು ಈ ಹಿಂದೆಯೇ ಗುರುತಿಸಲಾಗಿತ್ತು. ಅದರಂತೆ ಸಮಸ್ಯಾತ್ಮಕ ಹಳ್ಳಿಗಳನ್ನು ಗುರುತಿಸಿ, ಅಗತ್ಯ ಕ್ರಿಯಾ ಯೋಜನೆ ಮಾಡಿಕೊಳ್ಳಲಾಗಿತ್ತು. ಅದರಂತೆ ಈಗ ಕ್ರಮ ಕೈಗೊಳ್ಳಲಾಗುತ್ತಿದೆ, ಯಾವುದೇ ರೀತಿಯಲ್ಲಿ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಕೊರತೆ ಕಂಡುಬಂದ ತಕ್ಷಣ ಪರಿಹಾರ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಅವರು ಹೇಳಿದರು.

ತಹಶೀಲ್ದಾರರು ತಾ.ಪಂ. ಇಓ ಅವರೊಂದಿಗೆ ತಮ್ಮ ತಾಲೂಕಿನ ಪ್ರತಿ ಗ್ರಾಮಗಳಿಗೆ ಭೇಟಿ ನೀಡಬೇಕು. ಭೇಟಿ ಸಂದರ್ಭದಲ್ಲಿ ಗ್ರಾಮ ಪಂಚಾಯತ ಸದಸ್ಯರು, ಗ್ರಾಮದ ಪ್ರಮುಖರ ಸಭೆ ಜರಗಿಸಿ, ಕುಡಿಯುವ ನೀರು, ದನ ಕರುಗಳಿಗೆ ಮೇವು ಮತ್ತು ನರೇಗಾ ಕೂಲಿ ಕೆಲಸದ ಬಗ್ಗೆ ಸಲಹೆ ಮಾಹಿತಿ ಪಡೆದುಕೊಳ್ಳಬೇಕು.

ಅವರ ಅಗತ್ಯಕ್ಕೆ ಅನುಗುಣವಾಗಿ ನಿಯಮಾನುಸಾರ ಕುಡಿಯುವ ನೀರು ಮತ್ತು ಮೇವು ಪೂರೈಕೆಗೆ ಕ್ರಮವಹಿಸಬೇಕೆಂದು ಅವರು ಹೇಳಿದರು.

ಬರ ಪರಿಸ್ಥಿತಿ ಮತ್ತು ಸಾರ್ವತ್ರಿಕ ಚುನಾವಣೆ ಸಮಯವಾಗಿರುವುದರಿಂದ ಸಂಬಂಧಿಸಿದ ಗ್ರಾಮ ಮತ್ತು ಗ್ರಾಮ ಪಂಚಾಯಿತಿಗಳಲ್ಲಿ ಆಯಾ ಪಿ.ಡಿ.ಓ ಮತ್ತು ಗ್ರಾಮ ಆಡಳಿತ ಅಧಿಕಾರಿ ಕಡ್ಡಾಯವಾಗಿ ಸ್ಥಾನಿಕವಾಗಿ ಇದ್ದು, ಜನರಿಗೆ ತಕ್ಷಣ ಲಭ್ಯರಾಗಬೇಕು.

ಗ್ರಾಮದ ಯಾವುದೇ ಸಮಸ್ಯೆ ಬೇಡಿಕೆಗಳಿದ್ದಲ್ಲಿ ಗ್ರಾಮ ಮಟ್ಟದಿಂದ ತಕ್ಷಣ ತಹಸಿಲ್ದಾರರು ವರದಿ ಪಡೆದು ಕ್ರಮವಹಿಸಬೇಕು. ಕ್ಷೇತ್ರ ಮಟ್ಟದ ಅಧಿಕಾರಿಗಳು ಸ್ಥಾನಿಕವಾಗಿ ಸದಾ ಕಾಲ ಲಭ್ಯವಿರುವಂತೆ ನೋಡಿಕೊಳ್ಳುವುದು ತಾಲೂಕಿನ ಹಿರಿಯ ಅಧಿಕಾರಿಗಳ, ಜವಾಬ್ದಾರಿ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.


ಹೆಚ್ಚು ಪ್ರಮಾಣದಲ್ಲಿ ನೀರು ಪೂರೈಕೆ ಸಾಮರ್ಥ್ಯವಿರುವ ಕೊಳವೆ ಬಾವಿಗಳನ್ನು ಗುರುತಿಸಿ, ನೀರು ಪೂರೈಕೆ ಒಪ್ಪಂದ ಮಾಡಿಕೊಳ್ಳಿ. ಗ್ರಾಮಗಳಲ್ಲಿ ನೀರು ಪೋಲಾಗದಂತೆ ಎಚ್ಚರಿಕೆ ವಹಿಸಿ. ಜನರಲ್ಲಿ ಅಗತ್ಯಕ್ಕೆ ತಕ್ಕಷ್ಟು ಮಿತವಾಗಿ ನೀರು ಬಳಸಲು ಗ್ರಾಮ ಮಟ್ಟದಲ್ಲಿ, ವಾರ್ಡ ಮಟ್ಟದಲ್ಲಿ ಜಾಗೃತಿ ಮೂಡಿಸಲು ಕ್ರಮ ವಹಿಸಿ ಎಂದು ಅವರು ಹೇಳಿದರು.

ತಾಲೂಕುಗಳ ಗಡಿ ಗ್ರಾಮಗಳಲ್ಲಿ ಮೇವು, ಕುಡಿಯುವ ನೀರು ಸಮಸ್ಯೆ ಇದ್ದಾಗ ಪರಸ್ಪರ ಸಮನ್ವಯದಿಂದ ಪರಿಹರಿಸಿ. ಕುಡಿಯುವ ನೀರು ಪೂರೈಕೆಗೆ ಒಪ್ಪಂದವಾಗಿರುವ ಕೊಳವೆ ಬಾವಿಗೆ ನಿರಂತರ ಜ್ಯೋತಿ ವಿದ್ಯುತ್ ಸಂಪರ್ಕವಿದ್ದು, ವಿದ್ಯುತ್ ಪೂರೈಕೆ ಹೆಚ್ಚಳಕ್ಕೆ ಹೆಸ್ಕಾಂ ಗೆ ಪತ್ರ ಬರೆಯಲಾಗುವುದು ಎಂದರು.

ಯಾವುದೇ ರೀತಿಯ ಅನುದಾನದ ಕೊರತೆ ಇಲ್ಲ ಆರ್.ಓ ಪ್ಲಾಂಟ್ ಗಳನ್ನು ದುರಸ್ತಿ ಮಾಡಿ. ಅನುಮತಿಗಾಗಿ ಕಾಯದೆ, ಸ್ಥಳದಲ್ಲಿಯೇ ಪರಿಶೀಲಿಸಿ, ಕ್ರಮ ಅಗತ್ಯವಾಗಿದ್ದರೆ ಕೈಗೊಂಡು ನಿಯಮಾನುಸಾರ ವರದಿ ಸಲ್ಲಿಸಿ ಎಂದು ಅವರು ತಿಳಿಸಿದರು.


ರೈತರ ಬೇಡಿಕೆ ಇದ್ದಲ್ಲಿ, ರೊಟ್ಟಿಗವಾಡ, ಮೊರಬ ಮತ್ತು ಅಮರಗೋಳದಲ್ಲಿ ಮೇವು ದಾಸ್ತಾನು ಮಾಡಿ, ರೈತರ ಬೇಡಿಕೆಗೆ ಅನುಗುಣವಾಗಿ ಮೇವು ಪೂರೈಸಿ. ಸಾರ್ವಜನಿಕರು ಇಂತಹ ಬರ ಪರಿಸ್ಥಿತಿಯಲ್ಲಿ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಕೇಳಿ ಡಿಸಿ ಕಚೇರಿಯವರಿಗೆ ಬರದಂತೆ, ಕ್ರಿಯಾಶೀಲವಾಗಿ ತಾವೆಲ್ಲರೂ ಕೆಲಸ ಮಾಡಿ. ಗ್ರಾಮ ಮಟ್ಟದಲ್ಲಿ ಅಧಿಕಾ–ರಿಗಳು ಜನರ ಬೇಡಿಕೆಗಳಿಗೆ ಸ್ಪಂದಿಸಿದರೆ ಉತ್ತಮ ಆಡಳಿತ ನೀಡಲು ಅನುಕೂಲವಾಗುತ್ತದೆ. ತಹಶೀಲ್ದಾರರು ಕಡ್ಡಾಯವಾಗಿ ಪ್ರತಿ ಗ್ರಾಮಗಳಿಗೆ ಭೇಟಿ ನೀಡಬೇಕೆಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

## ಅರೆ ಬೆತ್ತಲಾಗಿ ಟವರ್ ಏರಿ ಹುಚ್ಚಾಟ ಮೆರೆದ ಕುಡುಕ



ವಿಜಯಪುರ: ಯುವಕನೋರ್ವ ಅರೆ ಬೆತ್ತಲಾಗಿ ಟವರ್ ಏರಿ ಹುಚ್ಚಾಟ ಮೆರೆದಿರುವ ಘಟನೆ ವಿಜಯಪುರ ಜಿಲ್ಲೆಯ ಇಂಡಿ ಪಟ್ಟಣದಲ್ಲಿ ನಡೆದಿದೆ. ಇಲ್ಲಿನ ಬಸವೇಶ್ವರ ಸರ್ಕಲ್ ನಲ್ಲಿರೋ ಜಿಯೋ ಟವರ್ ಏರಿದ ಆಸಾಮಿ ಹುಚ್ಚಾಟ ಮೆರೆದಿದ್ದಾನೆ. ಯುವಕ ಟವರ್‌ನ ತುದಿ ಏರಿ ನಿಂತಿದ್ದಾನೆ. ಆತನ ಹುಚ್ಚಾಟ ಕಂಡು ಸ್ಥಳೀಯರು ಶಾಕ್ ಆಗಿದ್ದಾರೆ. ಯುವಕನ ಹೆಸರು ಮಾಹಿತಿ ತಿಳಿದು ಬಂದಿಲ್ಲ. ಕಳೆದ 6 ತಿಂಗಳ ಹಿಂದೆ ಸಿಂದಗಿ ತಾಲೂಕಿನಲ್ಲಿ ಎರಡು ಬಾರಿ ಟವರ್ ಹತ್ತಿ ಹುಚ್ಚಾಟ ಮಾಡಿದ್ದ ಕುಡುಕ. ಆತನೇ ಮತ್ತೆ ಟವರ್ ಏರಿರಬೇಕು ಎಂಬ ಶಂಕೆ ವ್ಯಕ್ತವಾಗಿದೆ. ಸ್ಥಳಕ್ಕೆ ಅಗ್ನಿ ಶಾಮಕ ಸಿಬ್ಬಂದಿ ದೌಡಾಯಿಸಿ ಯುವಕನನ್ನ ಕೆಳಗೆ ಇಳಿಸೋಕೆ ಹರಸಾಹಸ ಪಡುತ್ತಿದ್ದಾರೆ.

## ಸುಳ್ಳದ ರೋಡ್ ಕ್ರಾಸ್ ಚೆಕ್ ಪೋಸ್ಟ್ ನಲ್ಲಿ ದಾಖಲೆ ಇಲ್ಲದ ನಗದು ವಶಕ್ಕೆ: ಎಆರ್.ಓ. ಡಾ. ಈಶ್ವರ ಉಳ್ಳಾಗಡ್ಡಿ



ಹುಬ್ಬಳ್ಳಿ: ಮಾ.18 ಸಂಜೆ 6.05ರ ಸುಮಾರಿಗೆ ಕಿರೆಸೂರಿನಿಂದ ಹುಬ್ಬಳ್ಳಿಗೆ ಬರುತ್ತಿದ್ದ GJ 05 JB7162 ಕಾರನ್ನು ಕರ್ತವ್ಯದಲ್ಲಿ ಹಾಜರಿದ್ದ ಮ್ಯಾಜಿಸ್ಟ್ರೇಟ್ ರಮಜಾನ ಸಾಬ ಕಿಲ್ಲೇದಾರ, ಎಸ್ ಎಸ್ ಟಿ ಹಾಗೂ ಎಫ್ ಎಸ್ ಟಿ 3 ರ, ನಾಗಾ ನಾಯ್ಕ, ಪೋಲೀಸ್ ಸಿಬ್ಬಂದಿಗಳು ತಡೆದು ತಪಾಸಣೆ ಮಾಡಿದಾಗ ಕಾರಿನಲ್ಲಿ ಓಂಪ್ರಕಾಶ್ ಎನ್ನುವವರಿಗೆ ಸೇರಿದ್ದ ದಾಖಲೆ ಇರದ 3,82,000/–ರೂಪಾಯಿ ನಗದು ಇರುವುದು ಕಂಡುಬಂದಿದ್ದು, ನಿಯಮಾನುಸಾರ ಹಣವನ್ನು ವಶಕ್ಕೆ ಪಡೆಯಲಾಗಿದೆ ಎಂದು ಹುಬ್ಬಳ್ಳಿ–ಧಾರವಾಡ ಕೇಂದ್ರ ವಿಧಾನಸಭಾ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಆಗಿರುವ ಹು–ಧಾ ಮಹಾನಗರಪಾಲಿಕೆ ಆಯುಕ್ತ ಡಾ.ಈಶ್ವರ ಉಳ್ಳಾಗಡ್ಡಿ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಎಂಸಿಸಿ ನೋಡೆಲ್ ಅಧಿಕಾರಿ ರವೀಂದ್ರ ಕುಮಾರ್, ಪೋಲೀಸ್ ಇನ್ಸ್ಪೆಕ್ಟರ್ ಕಿರಣ್ ಕುಮಾರ,ಎ.ಎಸ್.ಐ ಆರ್ ಜಿ ನಾಯ್ಕ, ಎಎಸ್ ಐ ಜಿ.ಸಿ.ಕಡೇಮನಿ ಈ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

ವಶಪಡಿಸಿಕೊಂಡಿರುವ ದಾಖಲೆ ಇಲ್ಲದ ಹಣವನ್ನು ತಕ್ಷಣೆ ಖಜಾನೆಯಲ್ಲಿ ಡಿಪಾಜಿಟ್ ಮಾಡಲಾಗಿದ್ದು, ಮುಂದಿನ ಕ್ರಮಕ್ಕಾಗಿ ಜಿಲ್ಲಾ ಸೀಜರ್ ಕಮಿಟಿಗೆ ವರದಿ ಸಲ್ಲಿಸಲಾಗಿದೆ ಎಂದು ಡಾ.ಈಶ್ವರ ಉಳ್ಳಾಗಡ್ಡಿ ಅವರು ತಿಳಿಸಿದ್ದಾರೆ.

## ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕ್ರಮವಹಿಸಿ: ಜಿಲ್ಲಾಧಿಕಾರಿ

ಬಳಾರಿ: ಜಿಲ್ಲೆಯ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ಎಲ್ಲೂ ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ಅಧಿಕಾರಿಗಳು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಪುರಸಭೆ, ಪಟ್ಟಣ ಪಂಚಾಯಿತಿ, ಗ್ರಾಮ ಪಂಚಾಯಿತಿ ಅಧಿಕಾರಿಗಳಿಗೆ ಸೂಚಿಸಿದರು.



ನಗರದ ಜಿಲ್ಲಾಧಿಕಾರಿಗಳ ಕಚೇ–ರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಪುರಸಭೆ, ಪಟ್ಟಣ ಪಂಚಾಯಿತಿ, ಗ್ರಾಮ ಪಂಚಾಯಿತಿ ಅಧಿಕಾರಿಗಳೊಂದಿಗೆ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಕುಡಿಯುವ ನೀರು ಕುರಿತು ಮಂಗಳವಾರದಂದು ವಿಡಿಯೋ ಸಂವಾದ ನಡೆಸಿ ಅವರು ಮಾತನಾಡಿದರು.

ಜಿಲ್ಲೆಯ ಪ್ರತಿ ಪುರಸಭೆ, ಪಟ್ಟಣ ಪಂಚಾಯಿತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಬೇಕು. ಮುಂಬರುವ ಸಮಸ್ಯಾತ್ಮಕ ಹಳ್ಳಿಗಳ ಗುರುತಿಸಿ ಕಾರ್ಯೋನ್ಮುಖರಾಗಬೇಕು ಎಂದು ತಿಳಿಸಿದರು.

ಯಾವುದೇ ಜಲಮೂಲಗಳ ನೀರನ್ನು ಕುಡಿಯುವ ನೀರು ಹೊರತುಪಡಿಸಿ ಬೇರೆ ಉದ್ದೇಶಗಳಿಗೆ ಬಳಸಬಾರದು. ಸಮರ್ಪಕವಾಗಿ ಕುಡಿಯುವ ನೀರನ್ನು ಪೂರೈಸಲು ಜಿಲ್ಲಾ ಹಾಗೂ ತಾಲೂಕು ಆಡಳಿತಗಳು ಸಿದ್ದವಾಗಿರಬೇಕು ಎಂದರು.

ಆದಷ್ಟು ಹೊಸ ಕೊಳವೆ ಬಾವಿ ತೋಡಿಸುವುದಕ್ಕಿಂತ ಇರುವ ಕೊಳವೆ ಬಾವಿಗಳನ್ನು ದುರಸ್ತಿಪಡಿಸಿ ಮೋಟಾರ್, ಪಂಪ್ ಅಳವಡಿಸಲು ಕ್ರಮವಹಿಸಬೇಕು. ನೀರು ಪೋಲಾಗದಂತೆ ನೋಡಿಕೊಳ್ಳಬೇಕು. ಅವಶ್ಯವಿದ್ದರೆ ಖಾಸಗಿ ಬೋರ್ವೆಲ್ಲಗಳನ್ನು ಉಪಯೋಗಿಸಿಕೊಳ್ಳಬೇಕು ಎಂದರು.

ಪ್ರಸ್ತುತ 15 ದಿನಗಳವರೆಗೆ ಎಲ್–ಎಲ್ಸಿ ಕಾಲುವೆಯಲ್ಲಿ ನೀರು ಹರಿಯಲಿದ್ದು, ಈ ಕೂಡಲೇ ಕೆರೆ, ಓಹೆಚ್ಟಿಗಳನ್ನು ತುಂಬಿಸಿಕೊಳ್ಳಬೇಕು. ನೀರಿನ ಸಂಗ್ರಹಣೆಗೆ ಕ್ರಮವಹಿಸಬೇಕು. ವಿವಿಧ ಭಾಗಗಳಲ್ಲಿ ನೀರಿನ ಕೊರತೆ ಕಂಡುಬಂದಲ್ಲಿ ಟ್ಯಾಂಕರ್ ಮೂಲಕ ಸರಬರಾಜು ಮಾಡಲು ಮುಂದಾಗಬೇಕು ಎಂದು ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾಧಿಕಾರಿಗಳು, ಪುರಸಭೆ, ಪಟ್ಟಣ ಪಂಚಾಯಿತಿ ಗ್ರಾಮ ಪಂಚಾಯಿತಿ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಹಾಯವಾಣಿ ಕೇಂದ್ರ ಆರಂಭ

ಬೆಳಗಾವಿ: ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗಿದ್ದರಿಂದ ಗ್ರಾಮೀಣ ಪ್ರದೇಶದ ಜನರಿಗೆ ಕುಡಿಯುವ ನೀರಿನ ವ್ಯವಸ್ಥೆ ನಿರ್ವಹಿಸಲು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಬೆಳಗಾವಿ ಹಾಗೂ ಚಿಕ್ಕೋಡಿ 24*7 ಕಂಟ್ರೋಲ್ ರೂಮ್‌ನ್ನು ತೆರೆಯಲಾಗಿರುತ್ತದೆ. ಬೆಳಗಾವಿ ವಿಭಾಗದ ವ್ಯಾಪ್ತಿಯಲ್ಲಿ ಬರುವ 06 ತಾಲೂಕುಗಳ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯತಿಗಳಲ್ಲಿ ಇರುವ ಕುಡಿಯುವ ನೀರಿನ ಸಮಸ್ಯೆ ಬಗ್ಗೆ ಸಹಾಯವಾಣಿ ಕೇಂದ್ರ ದೂರವಾಣಿ 0831–2420835 ಗೆ ಹಾಗೂ ಚಿಕ್ಕೋಡಿ ವಿಭಾಗದ ವ್ಯಾಪ್ತಿಯಲ್ಲಿ ಬರುವ 08 ತಾಲೂಕುಗಳ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯತಿಗಳಲ್ಲಿ ಇರುವ ಕುಡಿಯುವ ನೀರಿನ ಸಮಸ್ಯೆ ಬಗ್ಗೆ ಸಹಾಯವಾಣಿ ಕೇಂದ್ರ ದೂರವಾಣಿ 08338–275101 ಗೆ ಸಂಪರ್ಕಿಸಬೇಕೆಂದು ಬೆಳಗಾವಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೂ 1,000 ಕೋಟಿ ವೆಚ್ಚದ ಭಾರತದ ಎರಡನೇ ಮಲ್ಟಿ–ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಸಕ್ರಾ

ಬೆಂಗಳೂರು : ಸಕ್ರಾ ವರ್ಲ್ಡ್ ಆಸ್ಪತ್ರೆ ಬೆಂಗಳೂರಿನಲ್ಲಿ ಅತ್ಯಾಧುನಿಕ ಸೌಲಭ್ಯಕ್ಕಾಗಿ ತನ್ನ ದೂರದೃಷ್ಟಿಯ ಯೋಜನೆಯೊಂದನ್ನು ಪ್ರಕಟಿಸಿದೆ. ಎಂ.ಎನ್.ಸಿ ಆಸ್ಪತ್ರೆಗಳ ಸಮೂಹದ 10 ನೇ ವಾರ್ಷಿಕೋತ್ಸವದ ಸಂದರ್ಭದಲ್ಲಿ ಈ ಮಹತ್ವದ ಘೋಷಣೆ ಮಾಡಲಾಯಿತು. ಸಕ್ರಾ, ಭಾರತದ ಮೊದಲ 100% ಎಫ್.ಡಿ.ಐ ಮಲ್ಟಿ–ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಾಗಿದ್ದು, ಜಪಾನಿನ ನಾವೀನ್ಯತೆ ಮತ್ತು ತಂತ್ರಜ್ಞಾನದಿಂದ ನಡೆಸಲ್ಪಡುವ ಆರೋಗ್ಯ ಕ್ಷೇತ್ರದ ಪ್ರಮುಖ ಹೆಸರಾಗಿರುವ ಸೆಕೋಮ್ ಮೆಡಿಕಲ್ ಸಿಸ್ಟಮ್ ಮತ್ತು ಸಹಯೋಗಿ ಉದ್ಯಮ ಸಂಸ್ಥೆ ಟೊಯೊಟಾ ಟ್ಸುಶೋ ನಡುವಿನ ಸಹಯೋಗದಲ್ಲಿ ಈ ಯೋಜನೆ ಜಾರಿಗೆ ಬರಲಿದೆ.

ಅವರ ಉಪಸ್ಥಿತಿಯಲ್ಲಿ ನಡೆದ ಕಾರ್ಯಕ್ರಮ. ಜಪಾನ್‌ನ ಸೆಕೋಮ್ ಕಂಪೆನಿಯ ಕಾರ್ಯನಿರ್ವಾಹಕ ನಿರ್ದೇಶಕ & ಸೆಕೋಮ್ ಮೆಡಿಕಲ್ ಸಿಸ್ಟಮ್ ಕಂ. ಲಿಮಿಟೆಡ್ ನ ಮುಖ್ಯಸ್ಥ ತತ್ಸುರೊ ಫ್ಯೂಸ್, ಜಪಾನ್ನ ಟೊಯೋಟಾ ಟ್ಸುಶೋ ಕಾರ್ಪೊರೇಷನ್ ವಿಭಾಗದ ಸಿ.ಇ.ಓ, ಹಿರಿಯ ಕಾರ್ಯನಿರ್ವಾಹಕ ಅಧಿಕಾರಿ ಹಿರೋಷಿ ಯೋನೆನಾಗಾ, ಬೆಂಗಳೂರಿನ ಸಕ್ರ ವರ್ಲ್ಡ್ ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕ ಯುಯಿಚಿ ನಗಾನೊ, ಬೆಂಗಳೂರಿನ ಸಕ್ರ ವರ್ಲ್ಡ್ ಆಸ್ಪತ್ರೆಯ ಉಪ ವ್ಯವಸ್ಥಾಪಕ ನಿರ್ದೇಶಕ ನಯೋಯಾ ಮತ್ಸುಮಿ ಮತ್ತು ಬೆಂಗಳೂರಿನ ಸಕ್ರ ವರ್ಲ್ಡ್ ಆಸ್ಪತ್ರೆಯ ಸಮೂಹದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವಕೇಶ್ ಫಾಸು ಅವರು ಸಕ್ರಾದ ವಿಸ್ತರಣಾ ಯೋಜನೆಗಳು ಮತ್ತು ಇತರ ಅದ್ಭುತ ಯೋಜನೆಗಳ





ಅನಾವರಣ ಸಂದರ್ಭಕ್ಕೆ ಸಾಕ್ಷಿಯಾದರು.

ಬೆಂಗಳೂರು ಉತ್ತರದ ಬಾಣಸವಾಡಿಯಲ್ಲಿ 1,000 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ ನಿರ್ಮಿಸಲಾಗುವ ಆಯಕಟ್ಟಿನ ಸ್ಥಳದಲ್ಲಿರುವ ಸಕ್ರಾದ ಹೊಸ ಸೌಲಭ್ಯ, 500–ಹಾಸಿಗೆ ಸಾಮರ್ಥ್ಯ ಮತ್ತು 600,000 ಚದರ ಅಡಿ ವಿಸ್ತಾರದ ನಿರ್ಮಾಣ ಪ್ರದೇಶ ಹೊಂದಿದೆ. ಈ ಸೌಲಭ್ಯ ಸ್ಥಳೀಯರಿಗೆ ಮತ್ತು ಅದರಾಚೆಗಿನ ಜನರಿಗೂ ಮಿತಿಯಿಲ್ಲದ ಆರೋಗ್ಯ ಸೇವೆಗಳನ್ನು ಒದಗಿಸುವ ಸಕ್ರಾದ ಬದ್ಧತೆಯನ್ನು ತೋರಿಸುತ್ತದೆ.

ಹೊಸ ಘಟಕ ಸುಧಾರಿತ ಆಂಕೊಲಾಜಿ ಚಿಕಿತ್ಸೆ ಮತ್ತು ಅತ್ಯಾಧುನಿಕ ಪುನರ್ವಸತಿ ಯೋಜನೆಗಳು ಸೇರಿದಂತೆ ಸ್ಪೆಷಾಲಿಟಿಗಳು ಮತ್ತು ಸೂಪರ್ ಸ್ಪೆಷಾಲಿಟಿಗಳ ಸಮಗ್ರ ಶ್ರೇಣಿಯನ್ನು ಒದಗಿಸಲಿವೆ. "ಸೆಕಾಮ್ ಮೆಡಿಕಲ್ ಸಿಸ್ಟಮ್ ಮತ್ತು ಟೊಯೋಟಾ ಟ್ಸುಶೋಗಳ ಪರಿಣತಿಯ ಸಂಯೋಜನೆಯಲ್ಲಿ ಬೆಂಗಳೂರಿನಲ್ಲಿ ವಿಶ್ವ ದರ್ಜೆಯ ಆರೋಗ್ಯ ಪರಿಹಾರಗಳನ್ನು ಒದಗಿಸಲು ನಾವು ಹೆಮ್ಮೆಪಡುತ್ತೇವೆ. ಹೊಸ ಸೌಲಭ್ಯ ಸ್ಥಳೀಯ ಮತ್ತು ಅಂತರಾಷ್ಟ್ರೀಯ ಸಮುದಾಯಗಳ ಆರೋಗ್ಯ ಅಗತ್ಯಗಳನ್ನು ಪೂರೈಸುವ ನಮ್ಮ ದೃಢವಾದ ಬದ್ಧತೆಯ ವಿಸ್ತರಣೆಯಾಗಿದೆ," ಎಂದು ಹೊಸ ಯೋಜನೆ ಘೋಷಿಸಿದ ಟ್ಯಾಟ್ಸುರೊ ಫ್ಯೂಸ್ ಹೇಳಿದರು.

ಕಾರ್ಯಕ್ರಮ, ಭಾರತದಲ್ಲಿ ಸಕ್ರಾ ವರ್ಲ್ಡ್ ಆಸ್ಪತ್ರೆಯ ಜಾಗತಿಕ ನಾಯಕತ್ವದ ಆಸ್ಪತ್ರೆಯ ಹತ್ತು ವರ್ಷಗಳ ಪ್ರಯಾಣ, ಅತ್ಯಾಧುನಿಕ ಆರೋಗ್ಯ ತಂತ್ರಜ್ಞಾನದ ಏಕೀಕರಣ ಮತ್ತು ಜಪಾನ್ ಆವಿಷ್ಕಾರ ಮತ್ತು ಎರಡನೇ ಭಾಗದಲ್ಲಿ 1,000 ಹಾಸಿಗೆಗಳ ಹಂತ ಸೇ–ರಿದಂತೆ ಅದರ ಮುಂಬರುವ ಯೋಜನೆಗಳ ಕುರಿತು ಒಳನೋಟ ಒದಗಿಸಿತು.

"ನಾವೀನ್ಯತೆ ಮತ್ತು ಸಹಯೋಗದ ಶಕ್ತಿಯನ್ನು ಬಳಸಿಕೊಂಡು, ನಮ್ಮ ಹೊಸ ಸೌಲಭ್ಯದ ಆರಂಭ, ನಿರಂತರ ಆರೋಗ್ಯ ಪರಿಹಾರಗಳನ್ನು ತಲುಪಿಸುವ ನಮ್ಮ ಪ್ರಯಾಣದಲ್ಲಿ ಮಹತ್ವದ ಮೈಲಿಗಲ್ಲು," ಎಂದು ಹಿರೋಶಿ ಯೊನೆನಾಗಾ ವಿವ–ರಿಸಿದರು

"ವೈದ್ಯಕೀಯ ಸಂಶೋಧನೆ ಮತ್ತು ಶಿಕ್ಷಣ ನಮ್ಮ ಬೆಳವಣಿಗೆ ಹಾದಿಯ ಅವಿಭಾಜ್ಯ ಅಂಗ. ನಿರಂತರ ಕಲಿಕೆ ಮತ್ತು ನಾವೀನ್ಯತೆಯ ಸಂಸ್ಕೃತಿಯನ್ನು ಬೆಳೆಸುವುದು ನಮ್ಮ ಗುರಿ," ಎಂದು ಲವ್ಕೇಶ್ ಫಾಸು ಹೇಳಿದರು.

# ರಾಜಕೀಯ ಸಭೆ ಸಮಾರಂಭಗಳಿಗೆ ಪೂರ್ವಾನುಮತಿ ಕಡ್ಡಾಯ: ಶಕೀಲ ಅಹಮ್ಮದ

ಬೆಳಗಾವಿ: ಲೋಕಸಭೆ ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ದೂರುಗಳಿದ್ದಲ್ಲಿ ಅ–ತುರುಟ ೦೮೮ ತಂತ್ರಾಂಶವನ್ನು ಬಳಸಿಕೊಂಡು ದೂರು ದಾಖಲಿಸಬಹುದಾಗಿರುತ್ತದೆ. ರಾಜಕೀಯ ಸಭೆ ಸಮಾರಂಭಗಳಿಗೆ ಖಗಿಉಆಊಂ ೦೮೮ ತಂತ್ರಾಂಶದಲ್ಲಿ ಮಾತ್ರ ಅರ್ಜಿ ದಾಖಲಿಸಿ ಪರವಾನಿಗೆ ಪಡೆಯಬೇಕಾಗಿರುವುದರಿಂದ ಕಾರ್ಯಕ್ರಮ ನಡೆಯುವ 48 ಗಂಟೆಗಳ ಮುಂಚಿತವಾಗಿ ಅರ್ಜಿ ಸಲ್ಲಿಸುವುದು ಕಡ್ಡಾಯವಾಗಿರುತ್ತದೆ ಎಂದು ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಹಾಗೂ ಬೆಳಗಾವಿ–13 ಗ್ರಾಮೀಣ ವಿಧಾನ ಸಭಾ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಶಕೀಲ ಅಹಮ್ಮದ ಅವರು ತಿಳಿಸಿದರು.

ನಗರದ ತಹಶೀಲ್ದಾರ ಕಚೇರಿಯಲ್ಲಿ (ಹಳೆ ಪಾಲಿಕೆ ಕಟ್ಟಡ) ಮಂಗಳವಾರ (ಮಾ.19) ನಡೆದ ಲೋಕಸಭೆ ಚುನಾವಣೆ ಕುರಿತು ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

2024 ನೇ ಲೋಕಸಭಾ ಸಾರ್ವತ್ರಿಕಾ ಚುನಾವಣೆಗೆ ಸಂಬಂಧಿಸಿದಂತೆ ನವದೆಹಲಿಯ ಭಾರತ ಚುನಾವಣಾ ಆಯೋಗವು ವೇಳಾಪಟ್ಟಿಯನ್ನು ನಿಗದಿಪಡಿಸಿದಂತೆ ಬೆಳಗಾವಿ–02 ಲೋಕಸಭಾ ಕ್ಷೇತ್ರ, ಬೆಳಗಾವಿ–13 ಗ್ರಾಮೀಣ ವಿಧಾನ ಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಮಾ.16 ರಿಂದ ಜೂ.6 ರವರೆಗೆ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ ಎಂದು ಹೇಳಿದರು.

ಬೆಳಗಾವಿ–02 ಲೋಕಸಭಾ ಕ್ಷೇತ್ರ, ಬೆಳಗಾವಿ–13 ಗ್ರಾಮೀಣ ವಿಧಾನ ಸಭಾ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾ–ರಿಗಳ ಕಾರ್ಯಾಲಯವನ್ನು ತಹಶೀಲ್ದಾರ ಕಚೇರಿ ಕಚೇರಿ, 1ನೇ ಮಹಡಿ, ಹಳೇ ಮಹಾನಗರ ಪಾಲಿಕೆ ಕಟ್ಟಡ, ರಿಸಲ್ದಾರ ಗಲ್ಲಿ, ಬೆಳಗಾವಿ ಇಲ್ಲಿ ಸ್ಥಾಪಿಸಲಾಗಿರುತ್ತದೆ ಎಂದು ಹೇಳಿದರು.




ಜ. 22 ರಂದು ಪ್ರಕಟಗೊಂಡ ಮತದಾರರ ಪಟ್ಟಿಯನುಸಾರ ಒಟ್ಟು 294 ಮತಗಟ್ಟೆ ಇದ್ದು. ಮತದಾರರು ಪುರುಷ: **131813,** ಮಹಿಳಾ: 130766 ಹಾಗೂ ತೃತೀಯ ಲಿಂಗ: 10 ಒಟ್ಟು: 262589 ಹಾಗೂ ಪುರುಷ: 2183, ಮಹಿಳಾ: 52 ಒಟ್ಟು: 2235 ಸೇವಾ ಮತದಾರರು ಇರುತ್ತಾರೆ. ಮಾದರಿ ನೀತಿ ಸಂಹಿತೆ ಪಾಲನೆ ಕುರಿತು ಒಟ್ಟು 25 ಸೆಕ್ಟರ್ ಅಧಿಕಾರಿಗಳು, 4 ಎಫ್.ಎಸ್.ಟಿ.ತಂಡಗಳು, 02–ವ್ಹಿ.ಎಸ್.ಟಿ. ತಂಡಗಳನ್ನು ಜಿಲ್ಲಾ ಚುನಾವಣಾಧಿಕಾರಿಗಳು ನಿಯೋಜಿಸಿ ಆದೇಶಿಸಿರುತ್ತಾರೆ.

ಬೆಳಗಾವಿ–13 ಗ್ರಾಮೀಣ ವಿಧಾನ ಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ 1)ಬಾಚಿ, 2)ಬೆಕ್ಕಿನಕೇರಿ ಹಾಗೂ 3)ರಾಕಸಕೊಪ್ಪ ಈ ರೀತಿ ಒಟ್ಟು 03 ಚೆಕ್ ಪೋಸ್ಟ್‌ಗಳನ್ನು ಸ್ಥಾಪಿಸಲಾಗಿರುತ್ತದೆ. 85+ ವರ್ಷ ಮೇಲ್ಪಟ್ಟ (೦ಗಿಖಅ) ಹಾಗೂ ವಿಕಲಚೇತನ (೦ಗಿಕಆ) ಮತದಾರರನ್ನು ಇಐಇಅಖಿಔಓಇ ತಂತ್ರಾಂಶದ ಮೂಲಕ ಗುರುತಿಸಲಾಗುತ್ತಿದ್ದು ಸದರಿ ಮತದಾರರ ಮನೆಗೆ ತೆರಳಿ ಅಂಚೆ ಮತಪತ್ರದ ಮೂಲಕ ಮತದಾನ ಪ್ರಕ್ರಿಯೆ ಜರುಗಿಸಲಾಗುವುದು ಎಂದು ಹೇಳಿದರು.

ಬೆಳಗಾವಿ–13 ಗ್ರಾಮೀಣ ವಿಧಾನ ಸಭಾ ಮತಕ್ಷೇತ್ರಕ್ಕೆ ಸಂಬಂಧಿಸಿದಂತೆ ಮಸ್ಟರಿಂಗ್, ಡಿ–ಮಸ್ಟರಿಂಗ್ ಹಾಗೂ ಮತಗಟ್ಟೆ ಅಧಿಕಾ–ರಿಗಳಿಗೆ ತರಬೇತಿಯನ್ನು ವನಿತಾ ವಿಧ್ಯಾಲಯ ಆಂಗ್ಲ ಮಾಧ್ಯಮ ಪ್ರೌಢ ಶಾಲೆ, ಕ್ಲಬ್ ರೋಡ ಬೆಳಗಾವಿಯಲ್ಲಿ ನಡೆಸಲಾಗುವುದು.

ಬೆಳಗಾವಿ–13 ಗ್ರಾಮೀಣ ವಿಧಾನ ಸಭಾ ಮತಕ್ಷೇತ್ರಕ್ಕೆ ಸಂಬಂಧಿಸಿಸಂತೆ ಮತಯಂತ್ರಗಳ ಭದ್ರತಾ ಕೊಠಡಿ ಹಾಗೂ ಮತಯಂತ್ರಗಳ ತಯಾರಿಕೆ ವನಿತಾ ವಿಧ್ಯಾಲಯ ಆಂಗ್ಲ ಮಾಧ್ಯಮ ಪ್ರೌಢ ಶಾಲೆ, ಕ್ಲಬ ರೋಡ ಬೆಳಗಾವಿಯಲ್ಲಿ ನಡೆಸಲಾಗುವುದು. ಯಾವುದೇ ದೂರು ಹಾಗೂ ಸಲಹೆಗಳಿದ್ದಲ್ಲಿ ದೂರವಾಣಿ ಸಂಖ್ಯೆ: 0831–2407286 ಸಂಪರ್ಕಿಸಬಹುದು ಎಂದು ಬೆಳಗಾವಿ–13 ಗ್ರಾಮೀಣ ವಿಧಾನ ಸಭಾ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಶಕೀಲ ಅಹಮ್ಮದ ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ಈ ಸಂದರ್ಭದಲ್ಲಿ ಬೆಳಗಾವಿ ತಹಶೀಲ್ದಾರ್ ಸಿದ್ದರಾಯ ಭೋಸಗಿ ಅವರು ಹಾಜರಿದ್ದರು.

## ಮತ ಜಾಗೃತಿ ಅಭಿಯಾನಕ್ಕೆ ಚಾಲನೆ



ಬೆಳಗಾವಿ: ಬೆಳಗಾವಿ ತಾಲ್ಲೂಕ ಪಂಚಾಯತ ಆವರಣದಲ್ಲಿ ಸೋಮವಾರ (ಮಾರ್ಚ 19) ರಂದು ಸಹಾಯಕ ಚುನಾವಣಾಧಿಕಾರಿಗಳಾದ ಸಿ.ಡಬ್ಲ್ಯೂ ಶೇಕಿಲ್ ಅಹಮ್ಮದ್, ತಹಶೀಲ್ದಾರ ಹಾಗೂ ತಾಲ್ಲೂಕಾ ದಂಡಾಧಿಕಾರಿಗಳಾದ ಸಿದ್ದರಾಯ ಭೋಸಗಿ ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಮರಡ್ಡಿ ಪಾಟೀಲ್ ಅವರು ಸಹಿ ಮತ್ತು ಸೇಲ್ಪಿ ಪಾಯಿಂಟ್ ನಲ್ಲಿ ಫೋಟೋ ತೆಗೆದುಕೊಳ್ಳುವ ಮೂಲಕ ಮತ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿದರು.

ಸಹಾಯಕ ನಿರ್ದೇಶಕರು (ಪ.ರಾ) ಗಣೇಶ ಕೆ.ಎಸ್, ಸಹಾಯಕ ನಿರ್ದೇಶಕರು (ಅಕ್ಷರ ದಾಸೋಹ) ರಾಮನಗೌಡ ಮುದಕನಗೌಡರ, ತಾಲ್ಲೂಕ ಪಂಚಾಯತ ಸಿಬ್ಬಂದಿಗಳು ಸೇರಿದಂತೆ ವಿವಿಧ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾ–ರಿಗಳು ಮತ್ತು ಸಿಬ್ಬಂದಿಗಳು ಇದ್ದರು.

## ಉಪಹಾರ ಸೇವಿಸಿ 50ಕ್ಕೂ ಹೆಚ್ಚು ಮಕ್ಕಳು ಅಸ್ವಸ್ಥ: ಆಸ್ಪತ್ರೆಯಲ್ಲಿ ಮಕ್ಕಳ ನರಲಾಟ



ರಾಯಚೂರು: ಉಪಹಾರ ಸೇವಿಸಿ 50ಕ್ಕೂ ಹೆಚ್ಚು ಮಕ್ಕಳು ಅಸ್ವಸ್ಥಗೊಂಡ ಘಟನೆ ರಾಯಚೂರು ಜಿಲ್ಲೆ ದೇವದುರ್ಗ ತಾಲೂಕಿನ ಅರಕೇರದ ಬಾಲಕಿಯರ ವಸತಿ ನಿಲಯದಲ್ಲಿ ಬೆಳಕಿಗೆ ಬಂದಿದೆ. ವಾಂತಿ ಭೇದಿ ಸೇರಿ ತಲೆ ಸುತ್ತಿನಿಂದ ವಿದ್ಯಾರ್ಥಿಗಳು ಅಸ್ವಸ್ಥಗೊಂಡಿದ್ದಾರೆ.

ಪಟ್ಟಣದ ಪರಿಶಿಷ್ಟ ಪಂಗಡಕ್ಕೆ ಸೇರಿದ ವಸತಿ ನಿಲಯದ ಮಕ್ಕಳು ರಾತ್ರಿ ಚಪಾತಿ ಹಾಗೂ ಕಡಲೆ ಕಾಳು ಊಟ ಮಾಡಿದ್ದರು. ಬೆಳಗ್ಗೆ ವಗ್ಗರಣೆ ಉಪಹಾರ (ಮಂಡಕ್ಕಿ) ಸೇವಿಸಿದ್ದರು.

ಬೆಳಗ್ಗೆ ಉಪಹಾರ ಸೇವಿಸಿದ ನಂತರ ಸುಮಾರು 50 ಕ್ಕೂ ಹೆಚ್ಚು ಮಕ್ಕಳು ಅಸ್ವಸ್ಥಗೊಂಡಿದ್ದಾರೆ. ಕೆಲ ವಿದ್ಯಾರ್ಥಿಗಳು ತೀವ್ರ ಅಸ್ವಸ್ಥರಾಗಿದ್ದಾರೆ. ಸದ್ಯ ಅರಕೆರಾ ಪ್ರಾಥಮಿಕ ಆಸ್ಪತ್ರೆಯಲ್ಲಿ ಮಕ್ಕಳಿಗೆ ಚಿಕಿತ್ಸೆ ನೀಡಲಾಗುತ್ತಿದೆ.

ಮಾಹಿತಿ ತಿಳಿದು ಸ್ಥಳಕ್ಕೆ ಪೋಷಕರು ಬಂದಿದ್ದಾರೆ. ಮಕ್ಕಳ ನರಳಾಟ ಕಂಡು ವಸತಿ ನಿಲಯದ ಸಿಬ್ಬಂದಿ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ಇನ್ನು ಸ್ಥಳಕ್ಕೆ ಡಿಹೆಚ್‌ಓ ಡಾ ಸುರೇಂದ್ರ ಬಾಬು ಭೇಟಿ ನೀಡಿದ್ದಾರೆ. ತೀವ್ರ ಅಸ್ವಸ್ಥಗೊಂಡ ಮಕ್ಕಳ ಆರೋಗ್ಯ ವಿಚಾರಿಸಿದ್ದಾರೆ.

## ಮೊಮ್ಮಗನಿಗೆ 240 ಕೋಟಿ ರೂ. ಷೇರು ಉಡುಗೊರೆಯಾಗಿ ಕೊಟ್ಟ ನಾರಾಯಣ ಮೂರ್ತಿ



ನವದೆಹಲಿ: ಇನ್ಫೋಸಿಸ್ ಸಹ ಸಂಸ್ಥಾಪಕ ಎನ್. ಆರ್. ನಾರಾಯಣ ಮೂರ್ತಿ ಅವರು ಇದೀಗ ಷೇರು ಗಿಫ್ಟ್ ವಿಚಾರವಾಗಿ ಮತ್ತೆ ಮುನ್ನೆಲೆಗೆ ಬಂದಿದ್ದಾರೆ.

ಇನ್ಫೋಸಿಸ್ ಮುಖ್ಯಸ್ಥರಾಗಿರುವ ಎನ್. ಆರ್ ನಾರಾಯಣ ಮೂರ್ತಿ ಅವರು ತಮ್ಮ ನಾಲ್ಕು ತಿಂಗಳ ಮೊಮ್ಮಗನಿಗೆ 240 ಕೋಟಿಗೂ ಹೆಚ್ಚು ಮೌಲ್ಯದ ಷೇರುಗಳನ್ನು ಉಡುಗೊರೆಯಾಗಿ ನೀಡಿದ್ದಾರೆ.

ಈ ಮೂಲಕ ಮತ್ತೊಮ್ಮೆ ಅವರು ಹೆಸರು ಸುದ್ದಿಯಲ್ಲಿದೆ. ನಾರಾಯಣ ಮೂರ್ತಿಯವರು ಮೂರನೇ ಮೊಮ್ಮಗ 'ಏಕಾಗ್ರಹ ರೋಹನ್ ಮೂರ್ತಿ' ಅವರಿಗೆ ಇನ್ಫೋಸಿಸ್‌ನ 15,00,000 ಷೇರುಗಳನ್ನು ಹೊಂದಿದ್ದಾರೆ. ಇದು ಕಂಪನಿಯಲ್ಲಿ ಶೇಕಡ 0.04ರಷ್ಟು ಪಾಲು ಎನ್ನಲಾಗಿದೆ ಎಂಬುದು ವರದಿಯಿಂದ ಬಹಿರಂಗವಾಗಿದೆ.

ಷೇರಿನಲ್ಲಿ ಇಳಿಕೆ ಸದ್ಯ ಟೆಕ್ ಕಂಪನಿಯಲ್ಲಿ ನಾರಾಯಣ ಮೂರ್ತಿ ಅವರ ಷೇರು ಶೇಕಡಾ 0.40 ರಿಂದ ಶೇಕಡಾ 0.36 ಕ್ಕೆ ಅಂದರೆ 1.51 ಕೋಟಿ ಷೇರುಗಳಿಗೆ ಇಳಿಕೆ ಆಗಿದೆ.

ಏಕಾಗ್ರಹ ರೋಹನ್ ಅವರು ಇನ್ಫೋಸಿಸ್ ನಾರಾಯಣ ಮೂರ್ತಿ ಮತ್ತು ಸುಧಾ ಮೂರ್ತಿಯವರ ಮಗ ರೋಹನ್ ಮೂರ್ತಿ ಮತ್ತು ಸೊಸೆ ಅಪರ್ಣಾ ದಂಪತಿ ಮಗ, ನಾರಾಯಣ ಮೂರ್ತಿಯವರಿಗೆ ಮೂರನೇ ಮೊಮ್ಮಗ. ನವೆಂಬರ್ 2023 ರಲ್ಲಿ ಏಕಾಗ್ರಹ ರೋಹನ್ ಜನಿಸಿದರು.

ಇನ್ನೂ ಅಕ್ಷತಾ ಮೂರ್ತಿ ಮತ್ತು ಯುಕೆ ಪ್ರಧಾನ ಮಂತ್ರಿ ರಿಷಿ ಸುನಕ್ ಅವರ ಇಬ್ಬರು ಹೆಣ್ಣುಮಕ್ಕಳಿಗೆ ನಾರಾಯಣ ಮೂರ್ತಿ ಮತ್ತು ಸುಧಾ ಮೂರ್ತಿ ಅಜ್ಜ–ಅಜ್ಜಿಯಾಗಿದ್ದಾರೆ.

ರಾಜ್ಯಸಭಾ ಸದಸ್ಯೆ ಸುಧಾ ಮೂರ್ತಿ ಲೇಖಕಿಯು ಹೌದು?10,000 ಸಾಧಾರಣ ಹೂಡಿಕೆಯೊಂದಿಗೆ 1981ರಲ್ಲಿ ಆರಂಭವಾದ ಇನ್ಫೋಸಿಸ್ ನಂತರ ಭಾರತದ 2ನೇ ಅತಿದೊಡ್ಡ ಟೆಕ್ ಕಂಪನಿಯಾಗಿ ಬೆಳೆದಿದೆ.

# ಬೆಳಗಾವಿ ಸುವರ್ಣ ಸೌಧಕ್ಕೆ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಸಭಾಧ್ಯಕ್ಷ ಯು.ಟಿ.ಖಾದರ್ ಭೇಟಿ

## ಸುವರ್ಣಸೌಧ ಸಮರ್ಪಕ ನಿರ್ವಹಣೆಗೆ ಸೂಚನೆ

ಬೆಳಗಾವಿ: ಸುವರ್ಣ ವಿಧಾನಸೌಧದ ನಿರ್ವಹಣೆಯಲ್ಲಿ ಈ ಹಿಂದೆ ಕಂಡುಬಂದಿದ್ದ ಕೆಲವೊಂದು ನ್ಯೂನತೆಗಳನ್ನು ಸರಿಪಡಿಸಲು ನೀಡಲಾಗಿರುವ ನಿರ್ದೇಶನಗಳನ್ನು ಸಮರ್ಪಕವಾಗಿ ಜಾರಿಗೊಳಿಸಬೇಕು ಎಂದು ವಿಧಾನಪರಿಷತ್ ಮಾನ್ಯ ಸಭಾಪತಿ ಬಸವರಾಜ ಹೊರಟ್ಟಿ ಅವರು ಸೂಚನೆ ನೀಡಿದರು.

ಪೂರ್ವನಿಗದಿತ ಕಾರ್ಯಕ್ರಮದಂತೆ ಮಂಗಳವಾರ(ಮಾ.19) ಭೇಟಿ ನೀಡಿದ ವಿಧಾನ ಪರಿಷತ್ತಿನ ಸಭಾಪತಿ ಹಾಗೂ ವಿಧಾನಸಭೆ ಸಭಾಧ್ಯಕ್ಷರು ಬೆಳಗಾವಿ ಸುವರ್ಣ ವಿಧಾನಸೌಧದ ನಿರ್ವಹಣೆಯನ್ನು ಪರಿಶೀಲಿಸಿದರು.

2023 ರ ಡಿಸೆಂಬರ್ ಮಾಹೆಯಲ್ಲಿ ಜರುಗಿದ ವಿಧಾನಮಂಡಳದ ಚಳಿಗಾಲ ಅಧಿವೇಶನದ ಸಂದರ್ಭದಲ್ಲಿ ಪರಿಷತ್ ಹಾಗೂ ವಿಧಾನಸಭೆಯ ಸಭಾಂಗಣ ನಿರ್ವಹಣೆಯ ಕುರಿತು ನೀಡಲಾಗಿರುವ ನಿರ್ದೇಶನಗಳನ್ನು ಪಾಲಿಸಬೇಕು ಎಂದರು.



**ಅಧಿಕಾರಿಗಳಿಗೆ ಅಭಿನಂದನೆ:**

ಡಿಸೆಂಬರ್ 2003 ರಲ್ಲಿ ನಡೆದ ವಿಧಾನಮಂಡಳ ಅಧಿವೇಶನದ ಯಶಸ್ವಿಗೆ ವಿವಿಧ ಸಮಿತಿಗಳ ಮುಖ್ಯಸ್ಥರು ಹಾಗೂ ಸದಸ್ಯರುಗಳು ಶ್ರಮಿಸುವ ಮೂಲಕ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ್ದಾರೆ ಎಂದು ಸಭಾಪತಿ ಹೊರಟ್ಟಿ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಯಾವುದೇ ಅನಾನುಕೂಲ ಆಗದಂತೆ ಅಧಿವೇಶನವನ್ನು ಅಚ್ಚುಕಟ್ಟಾಗಿ ಹಾಗೂ ಯಶಸ್ವಿಯಾಗಿ ನಡೆಸಿದ್ದು, ಅವರೆಲ್ಲರೂ ಅಭಿನಂದನಾರ್ಹರು ಎಂದರು.

ಬೆಳಗಾವಿಯಲ್ಲಿ ಪ್ರತಿವರ್ಷ ಅಧಿವೇಶನವು ಇದೇ ರೀತಿ ಯಶಸ್ವಿಯಾಗಿ ನಡೆಯಬೇಕು ಎಂಬುದು ನಮ್ಮ ಆಶಯವಾಗಿದೆ ಎಂದು ತಿಳಿಸಿದರು.

ಬೆಳಗಾವಿಯಲ್ಲಿ ಇತ್ತೀಚೆಗೆ ನಡೆದ ಅಧಿವೇಶನವು ಅತ್ಯಂತ ಯಶಸ್ವಿಯಾಗಿದ್ದು, ಅತೀ ಹೆಚ್ಚು ಚರ್ಚೆ ನಡೆದಿರುವುದರ ಜತೆಗೆ ಅತೀ ಹೆಚ್ಚು ಮಸೂದೆಗಳು ಕೂಡ ಅಂಗೀಕರಿಸ ಲಾಗಿರುತ್ತದೆ ಎಂದು ವಿಧಾನಸಭೆ ಸಭಾಧ್ಯಕ್ಷರಾದ ಯು.ಟಿ.ಖಾದರ್ ಹೇಳಿದರು.

ಜಿಲ್ಲಾಧಿಕಾರಿ ನಿತೇಶ್ ಪಾಟೀಲ ನೇತೃತ್ವದಲ್ಲಿ ಜಿಲ್ಲಾಡಳಿತ, ಪೊಲೀಸ್ ಸೇರಿದಂತೆ ಸಾವಿರಾರು ಜನರು ಅತ್ಯುತ್ತಮವಾಗಿ ಕಾರ್ಯನಿರ್ವಹಿಸುವ ಮೂಲಕ ಅಧಿವೇಶನ ಯಶಸ್ವಿಗೊಳಿಸಿದ್ದ–ರಿಂದ ಪ್ರತಿಯೊಬ್ಬರಿಗೂ ಅಭಿನಂದನೆ ಸಲ್ಲಿಸಿದರು.

ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಲ್ಲಿಕಾರ್ಜುನ ಕಲಾದಗಿ, ಆಹಾರ ಮತ್ತು ನಾಗ–ರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕರಾದ ಶ್ರೀಶೈಲ್ ಕಂಕಣವಾಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪ ನಿರ್ದೇಶಕರಾದ ವಿದ್ಯಾವತಿ ಭಜಂತ್ರಿ ಮತ್ತಿತರರು ತಮ್ಮ ಅನಿಸಿಕೆ ಹೇಳಿದರು.

ಕರ್ನಾಟಕ ವಿಧಾನಸಭಾ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ, ವಿಧಾನಸಭೆ ಕಾರ್ಯದರ್ಶಿ ಮಹಾಲಕ್ಷ್ಮೀ, ಲೋಕೋಪಯೋಗಿ ಇಲಾಖೆಯ ಅಧೀಕ್ಷಕ ಎಂಜಿನಿಯರ್ ಅರುಣಕುಮಾರ್ ಪಾಟೀಲ ಉಪಸ್ಥಿತರಿದ್ದರು.

## ವಿಶ್ವಶಾಂತಿ ಮಹಾಯಾಗದಲ್ಲಿ ಭಾಗವಹಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್



ಬೆಳಗಾವಿ: ಬೆಳಗಾವಿಯ ಬಸವನ ಗಲ್ಲಿಯಲ್ಲಿರುವ ಜಿನ ಮಂದಿರದ ಮೂಲನಾಯಕ ಶ್ರೀ 1008 ಭ. ನೇಮಿನಾಥ ತೀರ್ಥಂಕರ, ಶಿಖರಸ್ಥ ಶ್ರೀ 1008 ಭ. ಪಾರ್ಶ್ವನಾಥ ತೀಥ–ಂಕರ ವೇದಿ ಪ್ರತಿಷ್ಠಾಪನೆಯ ಮಹಾ ಮಹೋತ್ಸವ ಹಾಗೂ ವಿಶ್ವಶಾಂತಿ ಮಹಾಯಾಗದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಮಂಗಳವಾರ ಭಾಗವಹಿಸಿದ್ದರು.

ಈ ಸಮಯದಲ್ಲಿ ಜಿನಮಂದಿರದ ಸಮಸ್ತ ಶ್ರಾವಕ, ಶ್ರಾವಕಿಯರು, ಪಂಚ ಕಮೀಟಿ, ಸರ್ವ ಟ್ರಸ್ಟಿ ಸದಸ್ಯರು, ಯುವ ಕಾಂಗ್ರೆಸ್ ಮುಖಂಡ ಮೃಣಾಲ ಹೆಬ್ಬಾಳಕರ್, ಪೂಜಾ ಕಮೀಟಿಯ ಸದಸ್ಯರು, ಮಹಿಳಾ ಮಂಡಳ ಹಾಗೂ ಸೇವಾದಳದವರು ಇದ್ದರು.

## ಲೋಕಸಭಾ ಚುನಾವಣಾ ಹೊತ್ತಲ್ಲಿ ಅಕ್ರಮ ಮದ್ಯ ಸಾಗಾಟ: 9.84 ಲಕ್ಷ ಮೌಲ್ಯದ ಎಣ್ಣೆ ಜಪ್ತಿ



ಬಾಗಲಕೋಟೆ: ಲೋಕಸಭಾ ಚುನಾವಣಾ ಸಮಯದಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ ಮದ್ಯವನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಸುಮಾರು 9.84 ಲಕ್ಷ ರೂ. ಮೌಲ್ಯದ ವಿವಿಧ ಬ್ರ್ಯಾಂಡ್ ಮದ್ಯ ಜಪ್ತಿ ಮಾಡಿದ್ದಾರೆ.

ಹುನಗುಂದ ವಲಯದ ಕೂಡಲಸಂಗಮ ಕ್ರಾಸ್ ನಲ್ಲಿ 75526 ರೂ.ಗಳ 10.80 ಲೀ ಮದ್ಯ ಜಪ್ತಿ ಮಾಡಿದ್ದಾರೆ. ಮುಧೋಳ ವಲಯದ ದಾದನಟ್ಟಿ ಕ್ರಾಸ್ ನಲ್ಲಿ ಒಟ್ಟು 9.09 ಲಕ್ಷ ರೂ.ಗಳ ಮೌಲ್ಯದ 40.50 ಲೀಟರ್ ಗೋವಾ ಮದ್ಯವನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಜಿಲ್ಲಾ ಚುನಾವಣಾಧಿಕಾರಿ ಜಾನಕಿ ಕೆ. ಎಂ ಈ ಬಗ್ಗೆ ಮಾಹಿತಿ ಹಂಚಿಕೊಂಡಿದ್ದು, ಎರಡು ಕಡೆಗಳಲ್ಲಿ ಖಚಿತ ಮಾಹಿತಿ ಮೇರೆಗೆ ಮದ್ಯ ಜಪ್ತಿ ಮಾಡಲಾಗಿದೆ. ಶಂಕರಯ್ಯ ಸರಗನಾಚಾರಿ, ಆಕಾಶ ಅಂದೊಡಗಿ ಮೇಲೆ ಪ್ರಕರಣ ದಾಖಲಿಸಲಾಗಿದೆ. ಬಳಿಕ ನ್ಯಾಯಾಲಯಕ್ಕೆ ವರದಿ ಸಲ್ಲಿಸಿದ್ದೇವೆ ಎಂದು ತಿಳಿಸಿದ್ದಾರೆ.

## ದೇಶದ ಅಭಿವೃದ್ಧಿಗೆ ಮಹಿಳೆಯರ ಕೊಡುಗೆ ಅಪಾರ: ಡಾ. ಸಚಿನ್ ಸಬನಿಸ

ಬೆಳಗಾವಿ: ಮಹಿಳೆಯರು ಎಲ್ಲ ಕ್ಷೇತ್ರದಲ್ಲಿ ಕಾರ್ಯ ನಿರ್ವಸುತ್ತಿದ್ದು, ದೇಶಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ದೇಶದ ಅಭಿವೃದ್ಧಿಯಲ್ಲಿ ಮಹತ್ವದ ಕೊಡುಗೆ ನೀಡುವುದ ರೊಂದಿಗೆ ಸಂಸಾರದ ಶಕ್ತಿಯಾಗಿ ನಿಂತಿದ್ದಾರೆ ಎಂದು ಡಾ. ಸಚಿನ್ ಸಬನಿಸ ಹೇಳಿದರು.

ಇಲ್ಲಿನ ಖಾಸಗಿ ಹೋಟೆಲ್ ನಲ್ಲಿ ಲಘು ಉದ್ಯೋಗ ಭಾರತಿ, ಸ್ವಾವಲಂಬಿ ಭಾರತ ಅಭಿಯಾನ ಹಾಗೂ TJSP ಬ್ಯಾಂಕ್ ಸಹಯೋಗದಲ್ಲಿ ಆಯೋಜಿಸಲಾದ ಮಹಿಳಾ ದಿನಾಚರಣೆಯ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಇತಿಹಾಸ ಉದ್ದಕ್ಕೂ ಮಹಿಳೆಯರು ಪಾತ್ರ ಅಪಾರವಾಗಿದೆ. ಮಹಿಳೆಯರು ತರಬೇತಿ ಪಡೆಯುವ ಮೂಲಕ ಸ್ವಉದ್ಯೋಗ ಕೈಗೊಂಡು ಸಮಾಜಕ್ಕೆ ಮಾದರಿಯಾಗಿದ್ದಾರೆ. ಸಂಸಾರದಕಷ್ಟ– ಸುಖಃದಲ್ಲಿ ಭಾಗಿಯಾಗಿ ಮನೆಯವರ ಏಳಿಗೆಗೆ ಶ್ರಮಿಸುವವಳು ಎಂದರು.

ಶಾರದಾ ಶಿವಪುತ್ರಪ್ಪ ಮಾತನಾಡಿ, ಶಿಕ್ಷಣ, ಉದ್ಯೋಗ ವಿವಿಧ ಕ್ಷೇತ್ರದಲ್ಲಿ ಮಹಿಳೆಯರು ಕಾರ್ಯ ನಿರ್ವಸುತ್ತಿದ್ದಾರೆ. ಇತ್ತೀಚೆಗೆದೇಶದ ಸೈನಿಕ ವೃತ್ತಿಯಲ್ಲಿ ಹೆಣ್ಣು ಮಕ್ಕಳು ಸೇರ್ಪಡೆ ಯಾಗುತ್ತಿರುವುದು ಹೆಮ್ಮೆಯ ಸಂಗತಿಎಂದು ಹೇಳಿದರು.

ಬಡತನದಲ್ಲಿದ್ದವೆ ಎಂದು ಮಹಿಳೆಯರು ಕುಗ್ಗಬಾರದು ಆ ಬಡತನವನ್ನು ಮೆಟ್ಟಿ ನಿಲ್ಲಬೇಕಿದೆ. ಹತ್ತಾರೂಜನರಿಗೆ ಉದ್ಯೋಗ ನೀಡುವ ಶಕ್ತಿಯಾಗಿ ನಿಲ್ಲಬೇಕು ಎಂದರು.

ಈ ಸಂದರ್ಭದಲ್ಲಿ TJSP ಬ್ಯಾಂಕ್ ನ ಸಹ ವ್ಯವಸ್ಥಾಪಕರಾದ ಸುಜಾತಾ ಅವರು ತಮ್ಮ ಬ್ಯಾಂಕ್ ಬಗ್ಗೆ ಮಾಹಿತಿಯನ್ನು ನೀಡಿದರು, ಹಾಗೂ ಖಃಎ ಸ್ತ್ರೀಯರಿಗೆ ಸನ್ಮಾನ ಕಾರ್ಯಕ್ರಮವನ್ನು ಮಾಡಿದರು.

ಸ್ವಾವಲಂಬಿಯ ಪ್ರಾಂತ ಸಹ ಸಮನ್ವಯಕರು ಮತ್ತು ಲಘು ಉದ್ಯೋಗ ಭಾರತೀಯರಾಜ್ಯ ಕಾರ್ಯದರ್ಶಿಗಳಾದ ಪ್ರಿಯಾ ಪುರಾನಿಕ್‌ಅವರು ಸ್ವಾಗತಿಸಿದರು, ಲತಾಅವರು ನಿರೂಪಿಸಿದರು, ಲಘು ಉದ್ಯೋಗ ಭಾರತದ ಬೆಳಗಾವಿಯ ಜಿಲ್ಲಾ ಸಂಂ–ಯೋಜಕರಾದ ನಳಿನಿ ವೆಮೋಲ್ಕರ್ ವಂದಿಸಿದರು. ಹಾಗೂ ಇತರರು ಇದ್ದರು.

# ಜೈನ ಸಮಾಜದ ಅಭಿವೃದ್ದಿಗೆ ಜಿತೊ ಸಂಸ್ಥೆ ಕಟಿಬದ್ದ: ಲಲಿತ ಗಾಂಧಿ

ಬೆಳಗಾವಿ: ಜೈನ ಇಂಟರ್‌ನ್ಯಾಷನ್‌ಲ ಟ್ರೆಡ ಆರ್ಗನೈಝೇಶನ ಜಿತೋ ಸಂಸ್ಥೆಯು ಜೈನ ಸಮಾಜದ ಸರ್ವಾಂಗೀಣ ಅಭಿವದ್ದಿಗಾಗಿ ಕಟ್ಟಿಬದ್ದವಾಗಿದ್ದು ಈಗಾಗಲೇ ಸಮಾಜದ ಸಾಕಷ್ಟು ಸಮಸ್ಯೆಗಳನ್ನು ಪರಿಹರಿಸಿ ಸಮಾಜದ ಏಳ್ಗೆಗಾಗಿ ಶ್ರಮಿಸುತ್ತಿದೆ ಎಂದು ಜಿತೊ ಸಂಸ್ಥೆಯ ಅಪೆಕ್ಸ ಸದಸ್ಯ ಹಾಗೂ ಅಖಿಲ ಭಾರತ ಜೈನ ಅಲ್ಪಸಂಖ್ಯಾತರ ಒಕ್ಕೂಟದ ರಾಷ್ಟ್ರೀಯ ಅಧ್ಯಕ್ಷ ಲಲಿತ ಗಾಂಧಿ ಅವರು ಅಭಿಪ್ರಾಯಪಟ್ಟರು.

ಬೆಳಗಾವಿಯ ಮಿಲೇನಿಯಂ ಗಾರ್ಡನದಲ್ಲಿ ಜಿತೊ ಸಂಸ್ಥೆಯ 18 ನೇ ಸಂಸ್ಥಾಪನಾ ದಿನಾಚರಣೆಯ ಸಮಾರಂಭ ಹಾಗೂ ಸಮಾಜದ ಸಾಧಕರನ್ನು ಗೌರವಿಸುವ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಜಿತೊ ಸಂಸ್ಥೆಯು ಕಳೆದ 18 ವರ್ಷಗಳಲ್ಲಿ ಸಾಕಷ್ಟು ಸಮಾಜಮುಖಿ ಕಾರ್ಯಗಳನ್ನು ಮಾಡಿದೆ. ಸಮಾಜದ ಮಧ್ಯಮ ಮತ್ತು ಬಡ ವರ್ಗದ ಜನರನ್ನು ಗುರುತಿಸಿ ಅವರಿಗೆ ಆರ್ಥಿಕ ನೆರವು ,ಶೈಕ್ಷಣಿಕ ನೆರವು, ಯುಪಿಎಸ್‌ಸಿ ಪರೀಕ್ಷೆಯ ಸಿದ್ದತೆಯ ಕಾರ್ಯಾಗಾರಗಳು, ವಸತಿ ನಿಲಯಗಳನ್ನು ನಿರ್ಮಿಸಿ ಸಮಾಜದ ವಿದ್ಯಾರ್ಥಿಗಳಿಗೆ ಉನ್ನತ ಶೀಕ್ಷಣ ನೀಡಲು ನೆರವಾಗುತ್ತ ಬಂದಿದೆ ಎಂದು ಅವರು ತಿಳಿಸಿದರು.

ಜೈನ ಸಮಾಜಕ್ಕೆ ರಾಷ್ಟ್ರೀಯ ಅಲ್ಪ ಸಂಖ್ಯಾತರ ಸ್ಥಾನ ಮಾನ ದೊರಕಿಸಿಕೊಡುವಲ್ಲಿ ಜಿತೊ ಸಂಸ್ಥೆ ಹಾಗೂ ಇನ್ನಿತರ ರಾಷ್ಟ್ರೀಯ ಸಂಸ್ಥೆಗಳು ಸಾಕಷ್ಟು ಶ್ರಮಿಸಿವೆ. ಹಾಗಾಗಿ ಇಂದು ಜೈನ ಸಮಾಜಕ್ಕೆ ಅಲ್ಪ ಸಂಖ್ಯಾತರ ಯೋಜನೆಗಳು ಲಭ್ಯವಾಗಿವೆ. ಈ ಯೋಜನೆಗಳ ಲಾಭವನ್ನು ಸಮಾಜದ ಬಾಂಧವರು ಪಡೆದುಕೊಳ್ಳಬೇಕೆಂದು ಅವರು ತಿಳಿಸಿದರು.



ಇದೇ ಸಂಧರ್ಭದಲ್ಲಿ ಕೆಕೆಜಿ ವಲಯ ಅಲ್ಪ ಸಂಖ್ಯಾತರ ಸಂಯೋಜಕಿಯಾದ ಕವಿತಾ ಜೈನ ಅವರು ಮಾತನಾಡಿ, ದೇಶದಲ್ಲಿ ಮೊಟ್ಟ ಮೊದಲ ಬಾರಿಗೆ ಜಿತೊ ಸಂಸ್ಥೆಯ ವತಿಯಿಂದ ಅಲ್ಪ ಸಂಖ್ಯಾತರ ಯೋಜನೆಗಳ ಕುರಿತು ಕೈಪಿಡಿಯನ್ನು ಹೊರತರಲಾಗಿದೆ. ಈ ಕೈಪಿಡಿಯಲ್ಲಿ ಕೇಂದ್ರ ಸರಕಾರ ಮತ್ತು ರಾಜ್ಯ ಸರಕಾರಗಳು ಅಲ್ಪ ಸಂಖ್ಯಾತ–ರಿಗೆ ನೀಡಿರುವ ಯೋಜನೆಗಳ ಕುರಿತು ಸಮಗ್ರ ಮಾಹಿತಿ ನೀಡಲಾಗಿದೆ. ಈ ಕೈಪಿಡಿ ಮುಖಾಂತರ ಜೈನ ಸಮಾಜದ ಬಾಂಧವರು ಅಲ್ಪ ಸಂಖ್ಯಾತರ ಯೋಜನೆಗಳನ್ನು ಸದುಪಯೋಗ ಪಡೆದುಕೊಳ್ಳಬೇಕೆಂದು ಅವರು ಕರೆ ನೀಡಿದರು.

ಸಮಾರಂಭದಲ್ಲಿ ಜೈನ ಸಮಾಜದಲ್ಲಿನ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರನ್ನು ಗುರುತಿಸಿ ಸನ್ಮಾನಿಸಿ ಗೌರವಿಸಲಾಯಿತು. ಯುವ ಸಾಧಕ ವಿಭಾಗದಲ್ಲಿ ಅಕ್ಷಯ ಕಟಾರಿಯಾ, ಸಮಾಜ ಸೇವೆ ವಿಭಾಗದಲ್ಲಿ ಪದ್ಮಪ್ರಸಾದ ಹೂಲಿ, ಅತ್ಯುತ್ತಮ ಶಿಕ್ಷಕ ವಿಭಾಗದಲ್ಲಿ ಮಿಥುನ ಶಾಸ್ತ್ರಿ, ಪ್ರಗತಿಪರ ರೈತ ವಿಭಾಗದಲ್ಲಿ ಐನಾಪೂರದ ಪ್ರೇಮನಾಥ ಉಗಾರೆ, ಯಶಸ್ವಿ ಉದ್ಯಮಿ ವಿಭಾಗದಲ್ಲಿ ತವನಪ್ಪ ಪಾಲಕರ, ಸಾಹಿತ್ಯ ಕ್ಷೇತ್ರದಲ್ಲಿ ಡಾ.ಪಿ.ಜಿ.ಕೆಂಪಣ್ಣವರ ಈ ಮಹನೀಯರನ್ನು ಈ ವರ್ಷದ ವಿಶೇಷ ಸಾಧಕರು ಎಂದು ಗುರುತಿಸಿ ಸನ್ಮಾನಿಸಲಾಯಿತು.

ಕೆಕೆಜಿ ವಿಭಾಗದ ಸಂಯೋಜಕ ಸಂತೋಷ ಪೋರವಾಲ, ಜಿತೊ ಲೇಡಿಜ ವಿಂಗ ಅಧ್ಯಕ್ಷೆ ಮಾಯಾ ಜೈನ, ಯುವ ವಿಭಾಗದ ಅಧ್ಯಕ್ಷ ದೀಪಕ ಸುಬೇದಾರ, ಬೆಳಗಾವಿ ವಿಭಾಗದ ಅಲ್ಪಸಂಖ್ಯಾತರ ವಿಭಾಗದ ಸಂಯೋಜ–ಕ ಸಿದ್ದಾರ್ಥ ಪಾಟೀಲ ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು. ಜಿತೊ ಬೆಳಗಾವಿ ವಿಭಾಗದ ಅಧ್ಯಕ್ಷ ವೀರಧವಲ ಉಪಾಧ್ಯೆ ಅತಿಥಿಗಳನ್ನು ಸ್ವಾಗತಿಸಿದರು. ಕಾರ್ಯಕ್ರಮ ಸಂಯೋಜಕ ರಾಜೇಶ ಭೋಸಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯದರ್ಶಿ ಅಶೋಕ ಕಟಾರಿಯಾ ಅತಿಥಿಗಳನ್ನು ಸ್ವಾಗತಿಸಿ ಕೊನೆಯಲ್ಲಿ ವಂದಿಸಿದರು.

## ಟಿಕೆಟ್ ಗಾಗಿ ಪಟ್ಟು ಹಿಡಿದ ಎಂಪಿ ರೇಣುಕಾಚಾರ್ಯ; ರವಿಕುಮಾರ್-ಮುರುಗೇಶ್ ನಿರಾಣಿಯ ಸಂಧಾನ ವಿಫಲ



ದಾವಣಗೆರೆ: ಮಾಧ್ಯಮಗಳಲ್ಲಿ ಪದೆ ಪದೇ ವರದಿಯಾಗುತ್ತಿರುವ ಹಾಗೆ ರಾಜ್ಯ ಬಿಜೆಪಿ ಘಟಕದಲ್ಲಿ ಬಂಡಾಯದ ಗಾಳಿ ಜೋರಾಗಿ ಬೀಸುತ್ತಿದೆ. ಮಾಜಿ ಸಚಿವ ಎಂಪಿ ರೇಣುಕಾಚಾರ್ಯ ದಾವಣಗೆರೆ ಲೋಕಸಭಾ ಕ್ಷೇತ್ರದ ಟಿಕೆಟ್ ತಮಗೆ ನೀಡಬೇಕೆಂದು ಪಟ್ಟು ಹಿಡಿದು ಕೂತಿದ್ದಾರೆ.

ಹಿರಿಯ ನಾಯಕ ಕೆಎಸ್ ಈಶ್ವರಪ್ಪರಂತೆ ಅವರು ರೆಬೆಲ್ ಪ್ರವೃತ್ತಿ ಪ್ರದರ್ಶಿಸುತ್ತಿರುವುದು ಗೊತ್ತಿರುವ ಸಂಗತಿಯೇ.

ಶಿವಮೊಗ್ಗದಲ್ಲಿ ನಡೆದ ಪ್ರಧಾನಿ ನರೇಂದ್ರ ಮೋದಿಯವರ ಕಾರ್ಯಕ್ರಮದಲ್ಲಿ ಇವ-ರಿಬ್ಬರು ಭಾಗಿಯಾಗದೆ ತಮ್ಮ ಮುನಿಸು ಮತ್ತು ಅಸಮಾಧಾನ ಪ್ರಕಟಿಸಿದರು. ರೇಣುಕಾಚಾರ್ಯ ಜೊತೆ ಇತರ ಅತೃಪ್ತ ನಾಯಕರು ಎಸ್ ಎ ರವೀಂದ್ರನಾಥ್, ಕರುಣಾಕರ ರೆಡ್ಡಿ, ಬಸವರಾಜ್, ಮಾಡಾಳ್ ಮಲ್ಲಿಕಾರ್ಜುನ, ಬಿಜೆ ಅಜಯಕುಮಾರ್, ಲೋಕಿಕೆರೆ ನಾಗರಾಜ್ ಮತ್ತು ಡಾ ರವಿಕುಮಾರ್ ಸೇರಿದ್ದಾರೆ ಮತ್ತು ಒಟ್ಟುಗೂಡಿ ಸಭೆಗಳನ್ನೂ ನಡೆಸುತ್ತಿದ್ದಾರೆ.

ಅವರ ಜೊತೆ ಮಾತುಕತೆ ನಡೆಸಿ ಸಂಧಾನಕ್ಕೆಂದು ಬಂದಿದ್ದ ಮಾಜಿ ಸಚಿವ ಮುರುಗೇಶ್ ನಿರಾಣಿ ಮತ್ತು ವಿಧಾನ ಪರಿಷತ್ ಸದಸ್ಯ ಎನ್ ರವಿಕುಮಾರ್ ಮಾಜಿ ಶಾಸಕನ ಮನವೊಲಿಸಲು ವಿಫಲರಾಗಿ ನಿರಾಶೆಯಿಂದ ವಾಪಸ್ಸು ಹೋಗಬೇಕಾಯಿತು. ದಾವಣಗೆರೆ ಹಾಲಿ ಸಂಸದ ಜಿಎಂ ಸಿದ್ದೇಶ್ವರ ಅವರ ಪತ್ನಿ ಗಾಯತ್ರಿಯವರಿಗೆ ನೀಡಿರುವ ಟಿಕೆಟ್ ಕ್ಯಾನ್ಸಲ್ ಮಾಡಿ ತನಗೆ ನೀಡಬೇಕೆಂದು ರೇಣುಕಾಚಾರ್ಯ ಪಟ್ಟು ಹಿಡಿದಿದ್ದಾರೆ.

## ಚಿಕ್ಕೋಡಿ ಲೋಕಸಭೆ ಕಾಂಗ್ರೆಸ್ ಮಡಿಲಿಗೆ ತೆಗೆದುಕೊಳ್ಳಲು ಇದು ಸುವರ್ಣಾವಕಾಶ: ಸಚಿವ ಸತೀಶ್ ಜಾರಕಿಹೊಳಿ



ರಾಯಬಾಗ: ಬೂತ್ ಮಟ್ಟದಲ್ಲಿ ಕಾಂಗ್ರೆಸ್ ಸರ್ಕಾರದ ಪಂಚ ಗ್ಯಾರಂಟಿಗಳನ್ನು ಪ್ರಚಾರ ಮಾಡುವ ಮೂಲಕ ಮತದಾರರ ಮನವೊಲಿಸಬೇಕು. ಚಿಕ್ಕೋಡಿ ಲೋಕಸಭೆ ಕ್ಷೇತ್ರವನ್ನು ಮತ್ತೆ ಕಾಂಗ್ರೆಸ್ ಪಕ್ಷದ ಮಡಿಲಿಗೆ ತೆಗೆದುಕೊಳ್ಳಲು ಇದು ಸುವರ್ಣಾವಕಾಶ ಇದ್ದು, ಯಾರೇ ಅಭ್ಯರ್ಥಿಯಾಗಿ ಆಯ್ಕೆ ಯಾದರೂ ಪಕ್ಷದ ಅಭ್ಯರ್ಥಿ ಗೆಲುವಿಗೆ ಶ್ರಮಿಸಬೇಕೆಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಚಿಕ್ಕೋಡಿ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ರಾಯಬಾಗ ಪಟ್ಟಣದಲ್ಲಿ ಜರುಗಿದ ಕಾಂಗ್ರೆಸ್ ಪಕ್ಷದ ಮುಖಂಡರ ಹಾಗೂ ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಣಾ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಸರಕಾರ ಐದು ಗ್ಯಾರಂಟಿಗಳಿಂದ ಬಂದ ಹಣ ಉಳಿಸುವ ಪೋಷಕರು, ತಮ್ಮ ಮಕ್ಕಳ ಶಿಕ್ಷಣ-ಕ್ಕೆ ವ್ಯಯಿಸಬೇಕು. ಚುನಾವಣೆಗೆ ಮುನ್ನವೇ ಕಾಂಗ್ರೆಸ್ ಮಾತು ನೀಡಿತ್ತು. ನಮ್ಮ ಸರಕಾರ ಅಧಿಕಾರಕ್ಕೆ ಬಂದರೆ ಐದು ಗ್ಯಾರಂಟಿಗಳನ್ನು ಈಡೇರಿಸುವುದಾಗಿ ಭರವಸೆ ನೀಡಿದ್ದೆವು. ಇದೀಗ ನಮ್ಮ ಸರಕಾರ ಅಧಿಕಾರಕ್ಕೆ ಬಂದು ಕೇವಲ ಆರು ತಿಂಗಳಲ್ಲೇ ಎಲ್ಲ ಗ್ಯಾರಂಟಿಗಳನ್ನು ಜಾ-ರಿಗೊಳಿಸಲಾಗಿದೆ ಎಂದರು.

ಈ ಗ್ಯಾರಂಟಿಗಳಿಂದ ಬಡ-ಮಧ್ಯಮ ಕುಟುಂಬವೊಂದಕ್ಕೆ ತಿಂಗಳಿಗೆ ಕನಿಷ್ಠ 5 ರಿಂದ 6 ಸಾವಿರ ಉಳಿತಾಯವಾಗುತ್ತಿದೆ. ಈ ಉಳಿತಾಯದ ಹಣದ ಪೈಕಿ ಕನಿಷ್ಠ ಶೇ.50ರಷ್ಟು ಹಣವನ್ನು ಮಕ್ಕಳ ಶಿಕ್ಷಣಕ್ಕೆ ಖರ್ಚು ಮಾಡಿ ಎಂದು ಪೋಷಕರಿಗೆ ಸಚಿವರು ಸಲಹೆ ನೀಡಿದರು.

ಕೇಂದ್ರದಲ್ಲಿ ಬಿಜೆಪಿ ಸರಕಾರ ಬಂದ ನಂತರ ದಿನೋಪಯೋಗಿ ವಸ್ತುಗಳ ಬೆಲೆ ಏರಿಕೆಯಿಂದಾಗಿ ಜನ ತತ್ತರಿಸಿ ಹೋಗಿದ್ದಾರೆ. ಬಡ-ಮಧ್ಯಮ ವರ್ಗದ ಜನ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಇದೇ ಕಾರಣಕ್ಕೆ ಕಾಂಗ್ರೆಸ್ ಸರಕಾರ ಗ್ಯಾರಂಟಿ ಯೋಜನೆಗಳನ್ನು ಜಾ-ರಿಗೊಳಿಸುವ ಮೂಲಕ ಅವರ ಸಂಕಷ್ಟಕ್ಕೆ ಸಹಾಯಹಸ್ತ ಚಾಚುವ ಕೆಲಸಕ್ಕೆ ಮುಂದಾಯಿತು ಎಂದು ಹೇಳಿದರು.

ಬಿಜೆಪಿ ಸರ್ಕಾರದ ಅವಧಿಯಲ್ಲಿ ಬೆಳಗಾವಿ ಜಿಲ್ಲೆ ಸೇ-ರಿದಂತೆ ನಿಮ್ಮ ಭಾಗದಲ್ಲಿಯೂ ಯಾವುದೇ ನೀರಾವರಿ ಸೇರಿ ಪ್ರಮುಖ ಯೋಜನೆಗಳನ್ನು ಜಾರಿಗೆ ತಂದಿಲ್ಲ. ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಬಿಜೆಪಿ ನಾಯಕರು ಸುಳ್ಳು ಹೇಳುವುದರಲ್ಲಿ ಕಾಲ ಕಳೆಯುತ್ತಿದ್ದಾರೆಂದು ಕೇಂದ್ರ ಬಿಜೆಪಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು .

ಈ ಸಂದರ್ಭದಲ್ಲಿ ಶಾಸಕರಾದ ಮಹೇಂದ್ರ ತಮ್ಮಣ್ಣವರ್, ಸತೀಶ್ ಶುಗರ್ಸ್ ನಿರ್ದೇಶಕ, ಯುವ ನಾಯಕ ರಾಹುಲ್ ಜಾರಕಿಹೊಳಿ, ಮಾಜಿ ಶಾಸಕರಾದ ಶ್ಯಾಮ ಘಾಟಗೆ, ಕಾಕಾ ಸಾಹೇಬ ಪಾಟೀಲ್, ಮಾಜಿ ಸಚಿವ ವೀರಕುಮಾರ್ ಪಾಟೀಲ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ದಯಾನಂದ ಪಾಟೀಲ್, ಚಿಕ್ಕೋಡಿ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಹಾಗೂ ಬೂಡಾ ಅಧ್ಯಕ್ಷ ಲಕ್ಷ್ಮಣ-ರಾವ್ ಚಿಂಗಳೆ, ಗಜಾನನ ಮಂಗಸೂಳಿ, ಮಹಾವೀರ ಮೋಹಿತೆ ಸೇರಿದಂತೆ ಕಾಂಗ್ರೆಸ್ ಪಕ್ಷದ ಮೂಂಚೂಣಿ ಘಟಕದ ಪದಾಧಿಕಾರಿಗಳು, ಕಾರ್ಯಕರ್ತರು ಇದ್ದರು.

## ಪತ್ನಿಗೆ ಅಶ್ಲೀಲ ವಿಡಿಯೋ ಕಳುಹಿಸಿದ ಪತಿಗೆ ಜೈಲು ಶಿಕ್ಷೆ ಪ್ರಕಟ



ಬೆಂಗಳೂರು: ಪತ್ನಿಗೆ ಇಮೇಲ್ ಮೂಲಕ ಅಶ್ಲೀಲ ವೀಡಿಯೋ ಕಳುಹಿಸಿದ 30ರ ಹರೆಯದ ವ್ಯಕ್ತಿಯೊಬ್ಬನನ್ನು ಮಾಹಿತಿ ತಂತ್ರಜ್ಞಾನ ಕಾಯ್ದೆಯಡಿ ಅಪರಾಧಿ ಎಂದು ಸ್ಥಳೀಯ ನ್ಯಾಯಾಲಯ ತೀಪು ನೀಡಿದ್ದು, ಒಂದು ತಿಂಗಳ ಜೈಲು ಶಿಕ್ಷೆ ಮತ್ತು 45,000 ರೂ. ದಂಡ ವಿಧಿಸಿದೆ.

ರಾಜಾಜಿನಗರದ ಖಾಸಗಿ ಕಂಪನಿಯೊಂದರಲ್ಲಿ ಕೆಲಸ ಮಾಡುತ್ತಿರುವ ಆರೋಪಿಯ ವಿರುದ್ಧ ಸಿಐಡಿ ಪೊಲೀಸರು **(CID Police)** ದೋಷಾರೋಪ ಹೊರಿಸಿದ್ದರು. ಶಿಕ್ಷೆಗೊಳಗಾದ ವ್ಯಕ್ತಿಯ ಪತ್ನಿ ವಿದೇಶದಲ್ಲಿ ಕೆಲಸ ಮಾಡುತ್ತಿದ್ದಾರೆ. 2016 ರಲ್ಲಿ ಇಬ್ಬರೂ ಮದುವೆಯಾಗಿದ್ದರು. ನಂತರದಲ್ಲಿ ಅವರ ನಡುವೆ ಭಿನ್ನಾಭಿಪ್ರಾಯಗಳು ಉಂಟಾಗಿತ್ತು. ಬಳಿಕ ಇಬ್ಬರೂ ವಿಚ್ಛೇದನಕ್ಕೆ ಅರ್ಜಿ ಸಲ್ಲಿಸಿದ್ದರು ಎಂದು ತನಿಖಾಧಿಕಾರಿಯೊಬ್ಬರು ಹೇಳಿದ್ದಾರೆ.

ಅಶ್ಲೀಲ ವಿಡಿಯೋ ಕಳುಹಿಸಿದ್ದ ಬಗ್ಗೆ ಸಂತ್ರಸ್ತೆಯ ಕಿರಿಯ ಸಹೋದರ ದೂರು ದಾಖಲಿಸಿದ್ದರು. ನಂತರ ಮಹಿಳೆ ಕೂಡ ಬೆಂಗಳೂರಿಗೆ ಆಗಮಿಸಿ ದೂರು ನೀಡಿದ್ದರು. ಅದರಂತೆ ಪೊಲೀಸರು ಎಫ್ಐಆರ್ ದಾಖಲಿಸಿದ್ದರು. ಆರೋಪಿಯು ಅಶ್ಲೀಲ ವೀಡಿಯೊ ಲಿಂಕ್ ಅನ್ನು ಆತನ ಪತ್ನಿಗೆ ಕಳುಹಿಸಿರುವುದು ತನಿಖೆಯಲ್ಲಿ ದೃಢಪಟ್ಟಿದೆ ಎಂದು ತನಿಖಾಧಿಕಾರಿಯೊಬ್ಬರು ತಿಳಿಸಿದ್ದಾಗಿ ವರದಿ ಉಲ್ಲೇಖಿಸಿದೆ.

### ಭುವನೇಶ್ವರಿ ಉತ್ಸವ ಸಂಘದವರಿಂದ ಮಹಿಳಾ ದಿನಾಚರಣೆ

## ಸಮಾಜದಲ್ಲಿ ಮಹಿಳೆಗೆ ಅತ್ಯುನ್ನತ ಸ್ಥಾನವಿದೆ: ವಿದ್ಯಾವತಿ ಭಜಂತ್ರಿ



ಬೆಳಗಾವಿ: ಕೆಟ್ಟ ಮಕ್ಕಳು ಹುಟ್ಟಬಹುದು ಆದರೆ ಕೆಟ್ಟ ತಾಯಿ ಹುಟ್ಟಲು ಸಾಧ್ಯವಿಲ್ಲ. ಸಮಾಜ ಮಹಿಳೆಯರನ್ನು ಗೌರವಿಸುತ್ತ ಅತ್ಯುನ್ನತ ಸ್ಥಾನವನ್ನು ನೀಡಿದೆ. ಶ್ರೀ ಭುವನೇಶ್ವರಿ ಉತ್ಸವ ಸಂಘದವರು ಸಮಾಜಮುಖಿ ಕೆಲಸಗಳನ್ನು ಮಾಡುತ್ತ ಬಂದಿದ್ದಾರೆ. ಈ ದೇಹ ನಶಿಸಿಹೋಗಬಹುದು ಮಾಡಿದ ಒಳ್ಳೆಯ ಕಾರ್ಯ ಶಾಸ್ವತ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ವಿದ್ಯಾವತಿ ಭಜಂತ್ರಿಯವರು ಇಂದಿಲ್ಲಿ ಹೇಳಿದರು.

ನಗರದ ಶ್ರೀ ಭುವನೇಶ್ವರಿ ಉತ್ಸವ ಸಂಘದವರು ಇದೇ ದಿ. 17 ರವಿವಾರದಂದು ಮ. 3 ಗಂಟೆಗೆ ಹಿಂದವಾಡಿ ವಿದ್ಯಾಪೀಠ ಹತ್ತಿರವಿರುವ ಐ. ಎಂ.ಇ.ಆರ್ ಸಭಾಭವನದಲ್ಲಿ 'ಮಹಿಳಾ ದಿನಾಚರಣೆ'ಯನ್ನು ಹಮ್ಮಿಕೊಂಡಿದ್ದರು. ಕಾರ್ಯಕ್ರಮವನ್ನು ಉದ್ಘಾಟಿಸಿದ ಶ್ರೀಮತಿ ವಿದ್ಯಾವತಿಯವರು ಮೇಲಿನಂತೆ ಅಭಿಪ್ರಾಯ ಪಟ್ಟರು.

ಖ್ಯಾತ ಸಾಹಿತಿಗಳಾದ ಡಾ. ಗುರುದೇವಿ ಹುಲೆಪ್ಪನವಮಠ "ವೃದ್ಧರ ಅಂತಿಮ ಕಾಲ ಸುಖಕರವಾಗಿವೆಯೇ?" ವಿಷಯ ಕುರಿತು ಮಾತನಾಡುತ್ತ ವೃದ್ಯಾಪ್ಯವು ಜೀವನದ ಒಂದು ಅವಿಭಾಜ್ಯ ಅಂಗವಾಗಿದ್ದು ಈ ಸಂದರ್ಭದಲ್ಲಿ ಬರುವ ಸಂಕಟ, ನೋವುಗಳನ್ನು ಸ್ಪರ್ಧಾಬಾವದಿಂದ ಸ್ವೀಕರಿಸಬೇಕು. ಯೋಗ, ವ್ಯಾಯಾಮ, ಪ್ರಾರ್ಥನೆ, ಆಧ್ಯಾತ್ಮಿಕದತ್ತ ಹೆಚ್ಚಿನ ಒಲವು ತೋ-ರಿಸುವದರ ಮೂಲಕ ಜೀವನ ಸಂಧ್ಯಾ ಜೀವನವನ್ನು ಸರಳಿಕರಿಸಿಕ್ಕೊಳ್ಳಬಹುದು ಎಂದು ಹೇಳಿದರು.

ಶ್ರೇಷ್ಠ ವಾಗ್ಮಿ ಡಾ. ಮೈತ್ರಾಯಿಣಿ ಗದಿಗೆಪ್ಪಗೌಡರ 'ಸ್ತ್ರೀ ಸ್ವಾಂತಂತ್ರ್ಯ', ಶ್ರೀಮತಿ ಬನಾ ಕೌಜಲಗಿ 'ಹೆಚ್ಚುತ್ತಿರುವ ವಿವಾದ ವಿಚ್ಛೇದನಗಳು ಮತ್ತು ಮಹಿಳಾ ಕಾನೂನು ದುರ್ಬಳಿಕೆ' ವಿಷಗಳ ಕು-ರಿತಂತೆ ಮಾತನಾಡಿದರು.

ಪಾರಂಪರಿಕ ಕೌದಿ ಹಾಗೂ ಕಸೂತಿ ಕಲಾವಿದೆ ಶ್ರೀಮತಿ ಶಾರವ್ವಾ ಶಿವಪುತ್ರ ದಾರೋಜಿ ಅವರನ್ನು ಸನ್ಮಾನಿಸಲಾಯಿತು. ವಿವಿಧ ಮಹಿಳಾ ಮಂಡಳದ ಕಲಾವಿದರಿಂದ ಸಾಂಸ್ಕೃತಿ-ಕ ಕಾರ್ಯಕ್ರಮಗಳು, ವೇಷಭೂಷಣ ಕಲಾಪ್ರಸ್ತುತಿಗಳು ಜರುಗಿದವು.

ಶಾಂತಾ ಹೆಗಡೆ, ಶೈಲಜಾ ಭಿಂಗೆ, ಜಯಶೀಲಾ ಬ್ಯಾಕೋಡ, ಆಶಾ ಕಡಪಟ್ಟಿ ಮತ್ತು ಭುವನೇಶ್ವರಿ ಉತ್ಸವ ಸಂಘದ ಎಲ್ಲ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಶ್ರೀಮತಿ ದೀಪಾ ಪದಕಿ ಪ್ರಾರ್ಥಿಸಿದರು. ಶ್ರೀಮತಿ ಲೀಲಾ ಚೌಗಲೆ ಸ್ವಾಗತಿಸಿದರು. ಮಧು ಮುತಾಲಿಕದೇಸಾಯಿ ಪರಿಚಯಿಸಿದರು. ಡಾ. ಭಾರತಿ ಮಠದ ನಿರೂಪಿಸಿದರು. ಶೀಲಾ ಗುಡಸ ವಂದಿಸಿದರು.

## ಪತಿಯನ್ನು ಹತ್ಯೆಗೈದು ಪತ್ನಿ ನಾಟಕ: ಮೊಬೈಲನಿಂದ ನಿಜಾಂಶ ಬಯಲು

ಮುಂಡಗೋಡ: ಸಹಜ ಸಾವು ಎಂದು ತಿಳಿದು ಅಂತ್ಯಕ್ರಿಯೆ ಮಾಡಿ ಹದಿನೈದು ದಿನಗಳ ನಂತರ ಪತ್ನಿಯೇ ಪತಿಯ ಮರ್ಮಾಂಗ ಹಿಸುಕಿ ಸಾಯಿಸಿದ್ದಾಳೆ ಎಂಬುವುದು ಬೆಳಕಿಗೆ ಬಂದಿದೆ.

ಪಟ್ಟಣದ ಲಂಬಾಣಿ ತಾಂಡಾದ ಟೋಪಣ್ಣ ಲಮಾಣಿ(44) ಎಂಬಾತ ಹತ್ಯೆಗೀಡಾಗಿದ್ದು, ಪತ್ನಿ ಶಾಂತವ್ವ ಲಮಾಣಿ ಆರೋಪಿ. ಕುಡಿತದ ಚಟ ಹೊಂದಿದ್ದ ಟೋಪಣ್ಣ ಪ್ರತಿ ದಿನವೂ ಮದ್ಯ ಸೇವನೆ ಮಾಡುತ್ತಿದ್ದ. ಎಂದಿನಂತೆ ಮದ್ಯ ಸೇವನೆ ಮಾಡಿ ಮನೆಗೆ ಬಂದಿದ್ದ. ಗಂಡ ಮನೆಯಲ್ಲಿ ನಿಯಂತ್ರಣ ತಪ್ಪಿ ಬಿದ್ದು ಸಾವನ್ನಪ್ಪಿದ್ದಾನೆ ಎಂದು ಪತ್ನಿ ಶಾಂತವ್ವ ಬಿಂಬಿಸಿದ್ದಳು. ಇದನ್ನೆ ಸತ್ಯವೆಂದು ನಂಬಿ ಕುಟಂಬದವರು ಹಿರಿಯರು ಟೋಪಣ್ಣನ ಅಂತ್ಯಕ್ರಿಯೆ ಮಾಡಿ ಮುಗಿಸಿದ್ದರು.

ಆದರೆ ಶಾಂತವ್ವ ದಿನಗಳು ಕಳೆದಂತೆ ಮೊಬೈಲ್ ನಲ್ಲಿ ಹೆಚ್ಚು ಇರುತ್ತಿದ್ದಳು. ಯಾರೊಂದಿಗೋ ಮಾತನಾಡುತ್ತಾ, ಗಂಡನ ಮರ್ಮಾಂಗವನ್ನು ಹಿಸುಕಿ ಕೊಲೆ ಮಾಡಿದ್ದೇನೆ ಎಂದು ಹೇಳುವುದನ್ನು ಕೇಳಿಸಿಕೊಂಡ ಅಕ್ಕ ಪಕ್ಕದ ಮನೆಯವರು ಸಮಾಜದ ಹಿರಿಯರಿಗೆ ವಿಷಯ ತಿಳಿಸಿದ್ದಾರೆ.

ನಂತರ ಹಿರಿಯರು ಸಭೆ ಸೇರಿ ಶಾಂತವ್ವ ಮೊಬೈಲ್ ಫೋನ್ ತಪಾಸಣೆ ಮಾಡಿ ವಿಚಾರಿಸಿದಾಗ ಗಂಡನ ಮರ್ಮಾಂಗವನ್ನು ಹಿಸುಕಿ ಸಾಯಿಸಿದ್ದೇನೆ ಎಂದು ಒಪ್ಪಿದ ನಂತರ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಈ ಕುರಿತು ಸೋಮವಾರ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಆರೋಪಿ ಶಾಂತವ್ವಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

## ಹುಬ್ಬಳ್ಳಿಗೆ ಸಾಗಿಸುತ್ತಿದ್ದ 2.93 ಕೋಟಿ ನಗದು ವಶ



ವಿಜಯಪುರ: ಹೈದರಾಬಾದ್ ನಿಂದ ಹುಬ್ಬಳ್ಳಿಗೆ ಟೊಯೋಟಾ ಕಾರೊಂದರಲ್ಲಿ ಸಾಗಿಸುತ್ತಿದ್ದ 2,93,50,000 ನಗದನ್ನು ವಿಜಯಪುರ ಸಿಇಎನ್ ಕ್ರೈಂ ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಹಣವನ್ನು ಸಾಗಾಟ ಮಾಡುತ್ತಿರುವ ಬಗ್ಗೆ ಖಚಿತ ಮಾಹಿತಿ ಬಂದ ಹಿನ್ನೆಲೆಯಲ್ಲಿ ಸಿಇಎನ್ ಪೊಲೀಸ್ ಠಾಣೆಯ ಪೊಲೀಸ್ ಇನ್ ಸ್ಪೆಕ್ಟರ್ ಸುನೀಲ್ ಕುಮಾರ್ ನಂದೇಶ್ವರ ಮತ್ತು ಸಿಬ್ಬಂದಿ ನಗರದ ಸಿಂದಗಿ ಬೈಪಾಸ್ ನಲ್ಲಿ ಕಾರನ್ನು ಅಡ್ಡಗಟ್ಟಿ ತಪಾಸಣೆ ಮಾಡಿದಾಗ ನಗದು ಪತ್ತೆಯಾಗಿದೆ. ಮಹಾರಾಷ್ಟ್ರ ನೋಂದಾಣಿ ಇರುವ ಎಂ.ಎಚ್.01 ಸಿಡಿ 7537 ಸಂಖ್ಯೆಯ ಟೊಯೋಟಾ ಕಾರಿನಲ್ಲಿ ಸಾಂಗಲಿಯ ಬಾಲಾಜಿ ನಿಕ್ಕಂ ಮತ್ತು ಸಚಿನ್ ಮೋಹಿತೆ ಎಂಬುವವರು ಹಣವನ್ನು ಸಾಗಿಸುತ್ತಿದ್ದರು.

ಸೂಕ್ತ ದಾಖಲೆಯನ್ನು ಒದಗಿಸದ ಹಿನ್ನೆಲೆಯಲ್ಲಿ ಹಣವನ್ನು ವಶಕ್ಕೆ ಪಡೆದು, ಆರೋಪಿಗಳನ್ನು ವಿಚಾರಣೆಗೆ ಒಳಪಡಿಸಲಾಗಿದೆ ಎಂದು ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಋಷಿಕೇಶ ಸೋನಾವಣೆ ತಿಳಿಸಿದ್ದಾರೆ.

## ದಾಖಲೆಯಿಲ್ಲದೆ ಕಾರಿನಲ್ಲಿ ಹಣ ಸಾಗಾಟ: 32.90 ಲಕ್ಷ ಜಪ್ತಿ



ಕೊಪ್ಪಳ: ದಾಖಲೆಯಿಲ್ಲದೆ ಕಾ-ರಿನಲ್ಲಿ ಸಾಗಿಸುತ್ತಿದ್ದ ಹಣವನ್ನು ಗಂಗಾವತಿ ಗ್ರಾಮೀಣ ಠಾಣೆ ಪೊಲೀಸರು ಮತ್ತು ತಹಶೀಲ್ದಾರ್ ಯು.ನಾಗರಾಜ ಅವರು ಜಪ್ತಿ ಮಾಡಿಕೊಂಡಿದ್ದಾರೆ.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಗಂಗಾವತಿ ವಿಧಾನಸಭಾ ಕ್ಷೇತ್ರದಲ್ಲಿ ಮೂರು ಕಡೆ ಚೆಕ್ ಪೋಸ್ಟ್ ನಿರ್ಮಾಣ ಮಾಡಲಾಗಿದ್ದು, ಗಂಗಾವತಿ ತಾಲ್ಲೂಕಿನ ಕಡೆಬಾಗಿಲು ಗ್ರಾಮದ ಚೆಕ್ ಪೋಸ್ಟ್ ಬಳಿ ದಾಖಲೆಯಿಲ್ಲದೆ ಕಾ-ರಿನಲ್ಲಿ ಸಾಗಿಸುತ್ತಿದ್ದ ಹಣ ವಶಕ್ಕೆ ಪಡೆಯಲಾಗಿದೆ. ಬಳ್ಳಾರಿ ಜಿಲ್ಲೆ ಸಿರುಗುಪ್ಪ ತಾಲ್ಲೂಕಿನಿಂದ ಹೊಸಪೇಟೆಗೆ ಪೀರಸಾಬ್ ಎನ್ನುವ ವ್ಯಕ್ತಿ ಹಣ ತೆಗೆದುಕೊಂಡು ಹೋಗುತ್ತಿದ್ದರು. ಅನುಮಾನಗೊಂಡ ಸಿಬ್ಬಂದಿ ತಪಾಸಣೆ ನಡೆಸಿದಾಗ ಹಣಕ್ಕೆ ದಾಖಲೆಯಿಲ್ಲದೇ ಇರುವುದು ಗೊತ್ತಾಗಿದೆ. ದಾಖಲೆ ನೀಡುವಂತೆ ಕೇಳಿದಾಗ, ಹಣ-ಕ್ಕೆ ದಾಖಲೆಗಳು ಇರಲಿಲ್ಲ. ಹಣ ಯಾರಿಗೆ ಸೇರಿದ್ದು, ಯಾವ ಕಾರಣಕ್ಕೆ ಸಾಗಿಸಲಾಗುತ್ತಿದೆ? ಎಂಬುದು ಗೊತ್ತಾಗಿಲ್ಲ. ವಿಚಾರಣೆ ನಡೆಸಲಾಗುತ್ತದೆ ಎಂದು ತಹಶೀಲ್ದಾರ್ ಯು.ನಾಗರಾಜ ತಿಳಿಸಿದ್ದಾರೆ.

## ನಿಶ್ಚಿತಾರ್ಥವಾಗಿದ್ದ ಯುವತಿ ಹತ್ಯೆಗೈದ ಯುವಕ




ಹಾವೇರಿ: ನಿಶ್ಚಿತಾರ್ಥವಾಗಿದ್ದ ಸೊಸೆಯನ್ನೇ ಮಾವನೊಬ್ಬ ಕೊಲೆ ಮಾಡಿರುವ ಘಟನೆ ಹಾವೇರಿ ಜಿಲ್ಲೆ ಹಾನಗಲ್ ತಾಲೂಕಿನ ಬೈಚವಳ್ಳಿ ಗ್ರಾಮದ ಬಳಿ ನಡೆದಿರುವುದು ತಡವಾಗಿ ಬೆಳಕಿಗೆ ಬಂದಿದೆ.

ದೀಪಾ ಗೊಂದಿ (21) ಕೊಲೆಯಾದ ಯುವತಿ. ಮಾಲತೇಶ ಬಾರ್ಕಿ (35) ವರ್ಷ ಕೊಲೆ ಮಾಡಿದ ಮಾವ. ಕಳೆದ ಕೆಲ ಸಮಯದ ಹಿಂದೆ ಸೊಸೆ ದೀಪಾಳೊಂದಿಗೆ ಮಾವ ಮದುವೆ ನಿಶ್ಚಿತಾರ್ಥ ಮಾಡಿಕೊಂಡಿದ್ದ. ಇವರಿಬ್ಬರ ವಿವಾಹ ದಿನಾಂಕ ಏಪ್ರಿಲ್ 22 ರಂದು ನಿಗದಿಯಾಗಿತ್ತು. ಆದರೆ ನಿಶ್ಚಿತಾರ್ಥದ ಬಳಿಕ ದೀಪಾ ಮಾವನೊಂದಿಗೆ ಮದುವೆಯಾಗಲು ನಿರಾಕರಿಸಿದ್ದಳು. ಮದುವೆ ನಿರಾಕರಿಸಿದ್ದಕ್ಕೆ ದೀಪಾಳನ್ನು ಕರೆದುಕೊಂಡು ಹೋಗಿ ನೇಣು ಹಾಕಿ, ವಿಷ ಕುಡಿಸಿ ಹತ್ಯೆ ಮಾಲತೇಶ ಹತ್ಯೆ ಮಾಡಿದ್ದಾನೆ. ಐದು ದಿನಗಳ ನಂತರ ಈ ಘಟನೆ ಬೆಳಕಿಗೆ ಬಂದಿದೆ. ಸದ್ಯ ಆರೋಪಿ ಮಾಲತೇಶನನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ. ಹಾನಗಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ನುಡಿದಂತೆ ನಡೆಯುವ ಪಕ್ಷ ಕಾಂಗ್ರೆಸ್ ಮಾತ್ರ: ಸಚಿವ ಸತೀಶ್ ಜಾರಕಿಹೊಳಿ



ರಾಯಬಾಗ: ನುಡಿದಂತೆ ನಡೆಯುವ ಪಕ್ಷ ಎಂದರೆ ಅದು ಕಾಂಗ್ರೆಸ್ ಪಕ್ಷ ಮಾತ್ರ. ಹೀಗಾಗಿ ಅಧಿಕಾರಕ್ಕೇರಿ ಆರು ತಿಂಗಳಲ್ಲೇ ಪ್ರಣಾಳಿಕೆಯಲ್ಲಿ ನೀಡಿದ ಎಲ್ಲಾ ಭರವಸೆಗಳನ್ನು ಈಡೇ-ರಿಸಿದ್ದು, ಕುಡಚಿ ಮತಕ್ಷೇತ್ರಕ್ಕೂ ನಮ್ಮ ಇಲಾಖೆಯಿಂದಲೇ 46 ಕೋಟಿ ರೂ. ಅನುದಾನ ನೀಡಿದ್ದೇನೆಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಕುಡಚಿ ಪಟ್ಟಣದಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಪಕ್ಷದ ಮುಖಂಡರ ಹಾಗೂ ಕಾರ್ಯಕರ್ತರ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಅಭಿವೃದ್ಧಿ ಕೆಲಸಗಳನ್ನು ಮುನ್ನಡೆಸುವ ಮೂಲಕ ಗ್ಯಾರಂಟಿ ಯೋಜನೆಗಳಿಗಾಗಿ 58 ಸಾವಿರ ಕೋಟಿ ರೂ. ಮೀಸಲಿಟ್ಟಿದ್ದೇವೆ. ಹೀಗಾಗಿ ಕಾರ್ಯಕರ್ತರು ಮನೆ ಮನೆಗಳಿಗೆ ತೆರಳಿ ಸರ್ಕಾರದ ಕಾರ್ಯಕ್ರಮಗಳನ್ನು ಮುಟ್ಟಿಸಬೇಕೆಂದು ಕರೆ ನೀಡಿದರು.

ಬಿ. ಶಂಕರನಾಂದ ಅವರ ನಂತರ ಚಿಕ್ಕೋಡಿ ಲೋಕಸಭೆಯಿಂದ ಪ್ರಕಾಶ ಹುಕ್ಕೇರಿ ಅವರನ್ನು ಬಿಟ್ಟರೇ ಕಳೆದ 25ರಿಂದ 30 ವರ್ಷ ಅವಧಿಯಲ್ಲಿ ಬಿಜೆಪಿ ಅಭ್ಯರ್ಥಿಗಳು ಆಯ್ಕೆಯಾಗಿದ್ದಾರೆ. ಆದರೆ ಈ ಬಾರಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಗೆಲ್ಲಲು ಎಲ್ಲಾ ರೀತಿಯ ಅವಕಾಶಗಳಿದ್ದು, ಹೈಕಮಾಂಡ್ ಯಾರನ್ನೂ ಅಭ್ಯರ್ಥಿಯಾಗಿ ಘೋಷಿಸಿದರೂ ಅವರ ಗೆಲುವಿಗೆ ಶ್ರಮಿಸಬೇಕೆಂದು ತಿಳಿಸಿದರು.

ಗ್ಯಾರಂಟಿಗಳಿಂದ ಅಭಿವೃದ್ಧಿ ಕೆಲಸಗಳನ್ನು ಆಗುತ್ತಿಲ್ಲ ಎಂದು ಬಿಜೆಪಿಯವರ ಆರೋಪದಲ್ಲಿ ಯಾವುದೇ ಹುರುಳಿಲ್ಲ. ನಮ್ಮ ಸರ್ಕಾರದಲ್ಲಿ ಅಭಿವೃದ್ಧಿ ಕಾರ್ಯಗಳು ಸದಾ ಮುನ್ನಡೆಯುತ್ತಿವೆ. ಬಿಜೆಪಿಯವರು ನೀಡಿದ್ದ ಭರವಸೆಗಳಲ್ಲಿ ಎಷ್ಟು ಈಡೇರಿಸಿದ್ದಾರೆ ಎಂಬುವುದನ್ನು ನೀವು ಗಮನಿಸಬೇಕು. ಆದ್ದರಿಂದ ಒಟ್ಟಾರೆಯಾಗಿ ಹಿರಿಯರಾದ ಪ್ರಕಾಶ್ ಹುಕ್ಕೇರಿ, ಶಾಸಕರಾದ ಲಕ್ಷ್ಮಣ ಸವದಿ, ರಾಜು ಕಾಗೆ, ಗಣೇಶ ಹುಕ್ಕೇರಿ, ಮಹೇಂದ್ರ ತಮ್ಮಣ್ಣವರ್, ಮಾಜಿ ಶಾಸಕರಾದ ಶ್ಯಾಮ್ ಘಾಟಗೆ ಸೇ-ರಿದಂತೆ ಜಿಲ್ಲೆಯ ಎಲ್ಲಾ ಶಾಸಕರು ಮುಖಂಡರು, ಕಾರ್ಯಕರ್ಯರು ಒಟ್ಟಾಗಿ ಚಿಕ್ಕೋಡಿ, ಬೆಳಗಾವಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯನ್ನು ಗೆಲ್ಲಿಸೋಣ ಎಂದರು.

ಶಾಸಕ ಮಹೇಂದ್ರ ತಮ್ಮಣ್ಣವರ್ ಮಾತನಾಡಿ, ಚಿಕ್ಕೋಡಿ ಲೋಕಸಭೆಯ ಕಾಂಗ್ರೆಸ್ ಅಭ್ಯರ್ಥಿ ಗೆಲುವಿಗೆ ಹಗಲಿರಳು ಶ್ರಮಿಸುತ್ತೇವೆ ಎಂದ ಅವರು, ಕಾರ್ಯಕರ್ತರು ಸರ್ಕಾರದ ಗ್ಯಾರಂಟಿಗಳನ್ನು ಪ್ರತಿ ಮನೆಗಳಿಗೂ ತಲುಪಿಸಬೇಕೆಂದು ಮನವಿ ಮಾಡಿದರು.

ಮಾಜಿ ಶಾಸಕ ಶ್ಯಾಮ ಘಾಟಗೆ ಮಾತನಾಡಿ, ಕುಡಚಿ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಅಧಿಕ ಮತಗಳನ್ನು ಇಲ್ಲಿನ ಜನತೆ ನೀಡುತ್ತಾರೆ. ಇದರಲ್ಲಿ ಯಾವುದೇ ಸಂದೇಹವಿಲ್ಲ ಎಂದು ಭರವಸೆ ನೀಡಿದರು.ಈ ಸಂದರ್ಭದಲ್ಲಿ ಮಾಜಿ ಸಚಿವ ವೀರಕುಮಾರ ಪಾಟೀಲ, ಚಿಕ್ಕೋಡಿ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಹಾಗೂ ಬೂಡಾ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ, ಗಜಾನನ ಮಂಗಸೂಳಿ ಸೇರಿದಂತೆ ಕಾಂಗ್ರೆಸ್ ಪಕ್ಷದ ಮೂಂಚೂಣಿ ಘಟಕದ ಪದಾಧಿಕಾರಿಗಳು ಇದ್ದರು.

## ಇಬ್ಬರು ಮಕ್ಕಳ ಜತೆ ಬೆಂಕಿಗೆ ಹಾರಿ ತಾಯಿ 'ಸಜೀವ ದಹನ'



ಚಿತ್ರದುರ್ಗ: ತಾಯಿಯೊಬ್ಬಳು ಬೇಲಿಗೆ ಬೆಂಕಿ ಹಚ್ಚಿ ಮೊದಲು ತನ್ನಿಬ್ಬರು ಮಕ್ಕಳನ್ನು ತಳ್ಳಿ ಬಳಿಕ ತಾನು ಅದೇ ಬೆಂಕಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಚಳ್ಳಕೆರೆ ತಾಲೂಕಿನ ಮಲ್ಲಸಮುದ್ರ ಗ್ರಾಮದಲ್ಲಿ ನಡೆದಿದೆ.

ಮಲ್ಲಸಮುದ್ರ ಗ್ರಾಮದ ನಿವಾಸಿಯಾದ ತಾಯಿ ಮಾರಕ್ಕ (24) ಹಾಗೂ ಮಕ್ಕಳಾದ ನಯನ್ (4) ಹರ್ಷವರ್ಧನ್ (2) ಮೃತ ದುರ್ದೈವಿಗಳು. ಗ್ರಾಮದ ಹೊರವಲಯದಲ್ಲಿದ್ದ ಬೇಲಿಯೊಂದಕ್ಕೆ ತಾಯಿ ಮೊದಲು ಬೆಂಕಿ ಹಚ್ಚಿದ್ದಾಳೆ. ಬಳಿಕ ಮೊದಲು ತನ್ನಿಬ್ಬರು ಮಕ್ಕಳನ್ನು ತಳ್ಳಿದ್ದಾಳೆ. ನಂತರ ತಾನು ಕೂಡ ಅದೇ ಬೆಂಕಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಬೆಂಕಿಯಿಂದ ಮೂವರು ಸುಟ್ಟು ಕರಕಲಾಗಿದ್ದಾರೆ. ತಾಯಿ, ಮಕ್ಕಳೊಂದಿಗೆ ಆತ್ಮಹತ್ಯೆ ಮಾಡಿಕೊಳ್ಳುವುದಕ್ಕೆ ಕಾರಣ ಏನು ಎಂಬುದು ಇನ್ನು ತಿಳಿದು ಬಂದಿಲ್ಲ. ಸದ್ಯ ಮಾಹಿತಿ ತಿಳಿದು ಸ್ಥಳಕ್ಕೆ ಆಗಮಿಸಿರುವ ತಳಕು ಠಾಣೆಯ ಪೊಲೀಸರು ಪರಿಶೀಲನೆ ನಡೆಸಿದ್ದಾರೆ. ಪೊಲೀಸರ ತನಿಖೆ ನಂತರವೇ ಆತ್ಮಹತ್ಯೆಗೆ ಮೂಲ ಕಾರಣ ತಿಳಿದು ಬರಲಿದೆ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089